♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 21 | ಶುಕ್ರವಾರ Friday | 26-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಇಂದು ಲೋಕ ಸಮರದ ಮತ ಸಂಗ್ರಾಮ

■ ಕಾಯಕಯೋಗಿ ಸುದ್ದಿ

ಮಂಡ್ಯ : ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಇಂದು (ಏ.26) ಮತದಾನ ನಡೆಯಲಿದ್ದು, ಕಣದಲ್ಲಿರುವ 14 ಅಭ್ಯರ್ಥಿಗಳ ಹಣೆಬರಹ ವನ್ನು ಮತದಾರರು ಬರೆಯಲಿದ್ದಾರೆ.

ಶುಕ್ರವಾರ ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದ್ದು, ಶಾಂತಿಯುತ ಮತದಾನಕ್ಕಾಗಿ ಜಿಲ್ಲಾಡಳಿತ ಸಕಲ ರೀತಿಯ ಸಿದ್ಧತಾ ಕಾರ್ಯಗಳನ್ನು ಪೂರ್ಣಗೊಳಿಸಿದೆ.

ಚುನಾವಣೆ ಮುನ್ನಾ ದಿನವಾದ ಗುರುವಾರ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಮಸ್ಟರಿಂಗ್ ಕಾರ್ಯಗಳನ್ನು ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಅದರಂತೆ ಮಳವಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ಮಳವಳ್ಳಿ ಶಾಂತಿ ಪದವಿ ಪೂರ್ವ ಕಾಲೇಜು, ಮದ್ದೂರು ವಿಧಾನ ಸಭಾ ಕ್ಷೇತ್ರಕ್ಕೆ ಮದ್ದೂರು ಎಚ್.ಕೆ.ವೀರಣ್ಣಗೌಡ ಪದವಿ ಪೂರ್ವ ಕಾಲೇಜು, ಮೇಲುಕೋಟೆ ವಿಧಾನ ಸಭಾ ಕ್ಷೇತ್ರಕ್ಕೆ ಪಾಂಡವಪುರದ ಪಿ.ಎಸ್.ಎಸ್.ಕೆ. ಪ್ರೌಢಶಾಲೆ, ರೈಲ್ವೆ ನಿಲ್ದಾಣ ಹತ್ತಿರ, ಪಾಂಡವಪುರ, ಮಂಡ್ಯ ವಿಧಾನ ಸಭಾಕ್ಷೇತ್ರದ ಮಂಡ್ಯ ವಿಶ್ವವಿದ್ಯಾಲಯ, ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದಲ್ಲಿ ಶ್ರೀರಂಗಪಟ್ಟಣ ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗಮಂಗಲ ವಿಧಾನ ಸಭಾ ಕ್ಷೇತ್ರದಕ್ಕೆ–ನಾಗಮಂಗಲ ಸರ್ಕಾರಿ ಪದವಿ ಪೂರ್ವ ಕಾಲೇಜು, ಕೆ.ಆರ್. ಪೇಟೆ ವಿಧಾನಸಭಾ ಕ್ಷೇತ್ರಕ್ಕೆ ಕೆ.ಆರ್.ಪೇಟೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಕೆ.ಆರ್. ನಗರದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಎಲ್ಲ ಸಿದ್ಧತೆ ಮಾಡಲಾಗಿದೆ.

ಮತಗಟ್ಟೆ ಕೇಂದ್ರಗಳಿಗೆ ಮತಯಂತ್ರ ರವಾನೆ : ಮತಗಟ್ಟೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಗುರುವಾರ ಬೆಳಿಗ್ಗೆಯಿಂದಲೇ ಆಯಾ ಕ್ಷೇತ್ರಗಳಲ್ಲಿ ನಿಗದಿಪಡಿಸಿರುವ ಮಸ್ಟರಿಂಗ್ ಹಾಗೂ ಡಿ–ಮಸ್ಟರಿಂಗ್ ಕೇಂದ್ರಗಳಿಂದ ನಿಯೋಜನೆಗೊಂಡ ಸ್ಥಳಗಳಿಗೆ ಬಸ್‌ಗಳಲ್ಲಿ ಮತಯಂತ್ರ, ವಿವಿ ಪ್ಯಾಟ್ ಮತ್ತು ಇತರೆ ಪರಿಕರಗಳನ್ನು ತೆಗೆದುಕೊಂಡು ತೆರಳಿದರು.

ಮಂಡ್ಯ ಲೋಕಸಭಾ ಕ್ಷೇತ್ರದ 8 ವಿಧಾನ ಸಭಾ ಕ್ಷೇತ್ರಗಳಲ್ಲಿ 2074 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಪ್ರತಿ ಮತಗಟ್ಟೆಗೆ ಒಬ್ಬರು ಅಧಿಕಾರಿ, ಸಹಾಯಕ ಅಧಿಕಾರಿ ಸಹಿತ ಸಿಬ್ಬಂದಿಯು ಜಿಲ್ಲಾಡಳಿತದಿಂದ ವ್ಯವಸ್ಥೆ ಕಲ್ಪಿಸಿದ ವಾಹನ ಗಳ ಮೂಲಕ ನಿಯೋಜಿಸಲ್ಪಟ್ಟ ಮತಗಟ್ಟೆಗಳಿಗೆ ನಿರ್ಗಮಿಸಿದರು.

ಶಾಂತಿಯುತ ಮತದಾನಕ್ಕೆ ಜಿಲ್ಲಾಡಳಿತ ಸಜ್ಜು



14 ಅಭ್ಯರ್ಥಿಗಳು ಕಣದಲ್ಲಿ

ಎಚ್.ಡಿ. ಕುಮಾರಸ್ವಾಮಿ – ಜನತಾ ದಳ (ಜಾತ್ಯತೀತ), ವೆಂಕಟರಮಣೇಗೌಡ – ಭಾರತೀಯ ರಾಷ್ಟ್ರೀಯ ಕಾಂಗ್ರೆಸ್, ಶಿವರಂಕರ್ ಎಸ್.– ಬಹುಜನ ಸಮಾಜ ಪಾರ್ಟಿ, ಚಂದ್ರಶೇಖರ ಕೆ.ಆರ್. – ಕರ್ನಾಟಕ ರಾಷ್ಟ್ರ ಸಮಿತಿ, ಬೂದಯ್ಯ – ಕರುನಾಡು ಪಾರ್ಟಿ, ಎಚ್.ಡಿ. ರೇವಣ್ಣ – ಪೂರ್ವಾಂಚಲ್ ಮಹಾ ಪಂಚಾಯತ್ ಪಾರ್ಟಿ, ಲೋಕೇಶ ಎಸ್. – ಉತ್ತಮ ಪ್ರಜಾಕೀಯ ಪಕ್ಷ, ಎಸ್. ಅರವಿಂದ್ – ಪಕ್ಷೇತರ, ಚನ್ನಮಾಯಿಗೌಡ – ಪಕ್ಷೇತರ, ಚಂದನ್‌ಗೌಡ ಕೆ. – ಪಕ್ಷೇತರ, ಎನ್. ಬಸವರಾಜು – ಪಕ್ಷೇತರ, ಬೀರೇಶ್. ಸಿ.ಟಿ. – ಪಕ್ಷೇತರ, ರಾಮಯ್ಯ ಡಿ. – ಪಕ್ಷೇತರ, ರಂಜಿತ. ಎನ್. – ಪಕ್ಷೇತರ.

17,79,243 ಮತದಾರರು

ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 17,79,243 ಮತದಾರರಿದ್ದು, ಈ ಪೈಕಿ 8,76,112 ಮಂದಿ ಪುರುಷರು, 9,02,963 ಮಹಿಳೆಯರು ಹಾಗೂ 168 ತೃತೀಯ ಲಿಂಗಿಗಳು ಇದ್ದಾರೆ. 8,396 ಮತಗಟ್ಟೆ ಸಿಬ್ಬಂದಿ ಹಾಗೂ ಸಿಆರ್‌ಪಿಎಫ್, ಎಸ್‌ಎಪಿ ಗುಜರಾತ್ ತಂಡಗಳು ಸೇರಿದಂತೆ 3,366 ಅಧಿಕ ಭದ್ರತಾ ಸಿಬ್ಬಂದಿ ಗಳನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾಗಿದೆ.

ಸಾಂಪ್ರದಾಯಿಕ ಮತಗಟ್ಟೆ ಸ್ಥಾಪನೆ:

ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರವಾರು 2 ಸಾಂಪ್ರದಾಯಿಕ ಮತಗಟ್ಟೆ ಗಳು, ಎರಡು ಪಿಂಕ್ ಮತಗಟ್ಟೆ ಒಂದೊಂದು ಪಿಡಬ್ಲ್ಯೂಡಿ, ಎರಡು ಯುವ ಮತದಾರರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

ತಾಲ್ಲೂಕು	ನಗರ	ಗ್ರಾಮೀಣ	ಒಟ್ಟು
ಮಳವಳ್ಳಿ	30	242	272
ಮದ್ದೂರು	24	230	254
ಮೇಲುಕೋಟೆ	16	248	264
ಮಂಡ್ಯ	115	147	262
ಶ್ರೀರಂಗಪಟ್ಟಣ	21	228	249
ನಾಗಮಂಗಲ	33	227	260
ಕೆ.ಆರ್.ಪೇಟೆ	21	240	261
ಒಟ್ಟು	260	1562	1822
ಕೆ.ಆರ್.ನಗರ	32	220	252
ಒಟ್ಟಾರೆ	292	1782	2074

ತಾಲ್ಲೂಕುವಾರು ಮತದಾರರ ವಿವರ

ತಾಲ್ಲೂಕು	ಪುರುಷರು	ಮಹಿಳೆಯರು	ಇತರೆ	ಒಟ್ಟು
ಮಳವಳ್ಳಿ	1,26,118	1,27,487	23	2,53,628
ಮದ್ದೂರು	1,04,280	1,11,443	22	2,15,745
ಮೇಲುಕೋಟೆ	1,00,379	1,03,010	09	2,03,398
ಮಂಡ್ಯ	1,11,868	1,17,759	36	2,29,663
ಶ್ರೀರಂಗಪಟ್ಟಣ	1,06,157	1,11,431	44	2,17,632
ನಾಗಮಂಗಲ	1,07,760	1,08,783	11	2,16,554
ಕೆ.ಆರ್.ಪೇಟೆ	1,11,542	1,12,284	11	2,23,837
ಜಿಲ್ಲೆ ಒಟ್ಟು	7,68,104	7,92,197	156	15,60,457
ಕೆ.ಆರ್.ನಗರ	1,08,008	1,10,766	12	2,18,786
ಒಟ್ಟಾರೆ	8,76,112	9,02,963	168	17,79,243

ಮತದಾನ ಹಬ್ಬಕ್ಕೆ ಸಜ್ಜಾದ ಮತಗಟ್ಟೆ



ಮಂಡ್ಯ : ಜಿಲ್ಲೆಯಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತದಾನದ ಹಬ್ಬ ಏಪ್ರಿಲ್ 26 ರಂದು ನಡೆಯಲಿದೆ.

ಮತದಾನದ ದಿನದಂದು ಮತದಾರರಿಗೆ ಹಬ್ಬದ ವಾತಾವರಣ ರೀತಿ ಸ್ವಾಗತಿಸಲು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಯುವ, ಸಖಿ, ವಿಶೇಷಚೇತನ, ಸಂಪ್ರದಾಯಿಕ ಹಾಗೂ ವಿಷಯದಾರಿತ ಮತಗಟ್ಟೆಗಳು ವಿವಿಧ ರೀತಿಯಲ್ಲಿ ಮತದಾರ ಕೈ ಬೀಸಿ ಕರೆಯಲಿವೆ.

ಮದ್ದೂರು ತಾಲ್ಲೂಕಿನ ಬನ್ನಹಳ್ಳಿ ಮತಗಟ್ಟೆಯಲ್ಲಿ ಕೊಕ್ಕರೆ ಬೆಳ್ಳೂರು ಅಭಯಾರಣ್ಯ ವಿಷಯಾಧಾರಿತ ಮತಗಟ್ಟೆಯಲ್ಲಿ ಗೊಡೆ ಬರಹಗಳ ಮೂಲಕ ಆಕರ್ಷಣೀಯವಾಗಿ ಚಿತ್ರದ ಮೂಲಕ ಮತದಾರರ ಮನಸೂರೆಗೊಳ್ಳುವಂತೆ ನಿರ್ಮಿಸಲಾಗಿದೆ.

ಶ್ರೀರಂಗಪಟ್ಟಣದ ಬೆಳಗೊಳ ಮತಗಟ್ಟೆಯಲ್ಲಿ ಯುವ ಮತದಾರರೇ ಕಾರ್ಯನಿರ್ವಹಿಸುವ ಮತಗಟ್ಟೆಯನ್ನು ಅನಾವರಣಗೊಳಿಸಲಾಗಿದೆ.

ಮಂಡ್ಯ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ಪಿಂಕ್ ಪೋಲಿಂಗ್ ಸ್ಟೇಷನ್– 40, ವಿಕಲ ಚೇತನರ ಪೋಲಿಂಗ್ ಸ್ಟೇಷನ್ – 8, ಸಾಂಪ್ರದಾಯಿಕ/ ವಿಷಯಾಧರಿತ ಪೋಲಿಂಗ್ ಸ್ಟೇಷನ್ – 16, ಯುವ ನೌಕರರ ಮತಗಟ್ಟೆಗಳು– 16 ಮತದಾರರನ್ನು ಆಕರ್ಷಿಸಲು ಸಜ್ಜಾಗಿವೆ.



ಮಂಡ್ಯ : ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಮಂಡ್ಯ ವಿಶ್ವವಿದ್ಯಾಲಯದಲ್ಲಿ ನಡೆದ ಮಸ್ಟರಿಂಗ್ ಕೆಲಸವನ್ನು ಪರಿಶೀಲಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಪರಿಷ್ಠಾಧಿಕಾರಿ ಎನ್ ಯತೀಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಯ ಶೇಖ್ ತನ್ವೀರ್ ಆಸಿಫ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕೊಳ್ಳೇಗಾಲ ಶಾಸಕರ ಕಾರು ಅಪಘಾತ: ಅದೃಷ್ಟವಶಾತ್ ಪಾರು



ಚಾಮರಾಜನಗರ: ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ಪ್ರಯಾಣಿಸುತ್ತಿದ್ದ ಕಾರು ಮೈಸೂರಿನ ಹೊರವಲಯದಲ್ಲಿ ಸ್ವಲ್ಪಂ ಅಪಘಾತವಾಗಿರುವ ಘಟನೆ ಬುಧವಾರ ರಾತ್ರಿ 11.50 ರಲ್ಲಿ ನಡೆದಿದೆ. ಘಟನೆಯಲ್ಲಿ ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ಶಾಸಕರ ಆಪ್ತ ಸಹಾಯಕ ಹೊಂಗೂರು ಚೇತನ್ ಮತ್ತು ವಾಹನ ಚಾಲಕ ಸತೀಶ್ ಪವಾಡದ ರೀತಿಯಲ್ಲಿ ಅಪಾಯದಿಂದ ಪಾರಾಗಿದ್ದಾರೆ.

ಕೊಳ್ಳೇಗಾಲದಿಂದ ಮೈಸೂರಿನತ್ತ ತೆರಳುತ್ತಿದ್ದಾಗ ಕಾರಿನ ಟೈರ್ ಬ್ಲಾಸ್ಟ್ ಆದ ಪರಿಣಾಮ ಕಾರು ನಿಯಂತ್ರಣ ಕಳೆದುಕೊಂಡು ರಸ್ತೆಬದಿ ಹಳ್ಳಕ್ಕೆ ಇಳಿದು ನಿಂತಿದೆ. ಯಾವುದೇ ಬೇರೆ ವಾಹನಗಳು ಆ ವೇಳೆ ಇಲ್ಲದಿದ್ದು ಜೊತೆಗೆ ಕಾರು ರಸ್ತೆಬದಿಯ ಹಳ್ಳಕ್ಕೆ ಬಂದು ನಿಂತಿದ್ದರಿಂದ ಎಲ್ಲರೂ ಪಾರಾಗಿದ್ದಾರೆ.

ಸುಳ್ಳು ಹೇಳಿದ ಮೋದಿಯವರಿಗೆ ಮತ ನೀಡಬೇಡಿ: ಜನರಿಗೆ ಸಿಎಂ ಕರೆ

ಗದಗ, (ಗಜೇಂದ್ರಗಡ) ಏಪ್ರಿಲ್ 25: ಕನ್ನಡ ನಾಡಿನ ಜನರ ಸಂಕಷ್ಟಗಳಿಗೆ ಸ್ಪಂದಿಸದ ನರೇಂದ್ರ ಮೋದಿಯವರಿಗೆ ಲೋಕಸಭಾ ಚುನಾವಣೆ ಬಂದಾಗ ಮಾತ್ರ ಕನ್ನಡಿಗರ ನೆನಪಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಆನಂದಸ್ವಾಮಿ ಗಡ್ಡೆದೇವರಮಠ ರ ಪರವಾಗಿ ಆಯೋಜಿಸಲಾಗಿದ್ದ ಪ್ರಜಾಧ್ವನಿ–02 ಲೋಕಸಭಾ ಚುನಾವಣಾ ಪ್ರಚಾರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಬಸವರಾಜ ಬೊಮ್ಮಾಯಿ ಅಭಿವೃದ್ಧಿ ಶೂನ್ಯ: ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಈ ಕ್ಷೇತ್ರವನ್ನು ತಮ್ಮ ಪ್ರತಿಷ್ಠೆಯ ಕಣವಾಗಿಸಿಕೊಂಡಿದ್ದಾರೆ. ಅವರು ಮುಖ್ಯಮಂತ್ರಿಯಾಗಿ ಎರಡು ವರ್ಷಗಳ ಕಾಲ ಇದ್ದರೂ, ಈ ಭಾಗಕ್ಕೆ ಅವರ ಕೊಡುಗೆ ಶೂನ್ಯ. ಈ ಲೋಕಸಭಾ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿಯನ್ನು ಮಾಡದ ಬಸವರಾಜ ಬೊಮ್ಮಾಯಿಯವರನ್ನು ನೋಡಿಸುವುದು ಎಲ್ಲರ ಕರ್ತವ್ಯ. ರೋಣ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಗೆ 25 ಸಾವಿರಿಕ್ಕಿಂತಲೂ ಹೆಚ್ಚು ಮತವನ್ನು ಕೊಡುತ್ತೀರೆಂಬ ವಿಶ್ವಾಸವಿದೆ ಎಂದರು.

ಮೋದಿ ಹೇಳಿದ ಅಚ್ಛೇ ದಿನ್ ಬರಲೇ ಇಲ್ಲ: ಮೋದಿಯವರು 10 ವರ್ಷಗಳ ಪ್ರಧಾನಿಯಾಗಿದ್ದರೂ, ಅವರು ಕೊಟ್ಟ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ. ಆದ್ದರಿಂದ ಮತ್ತೊಮ್ಮೆ ಜನರ ಬಳಿ ಮತ ಕೇಳುವ ನೈತಿಕತೆ ಅವರಿಗೆ ಇಲ್ಲ ಎಂದು ಜನರು ಹೇಳಬೇಕು. 2014 ರಲ್ಲಿ ಏದೇಶ ಕಪ್ಪು ಹಣವನ್ನು ಎಲ್ಲರ ಖಾತೆಗೆ 15 ಲಕ್ಷ ನೀಡುವ ಭರವಸೆ, ಪ್ರತಿ ವರ್ಷ 2 ಕೋಟಿ ಉದ್ಯೋಗ, ರೈತರ ಆದಾಯ ದ್ವಿಗುಣಗೊಳಿಸುವ ಸುಳ್ಳನ್ನು ಹೇಳಿದ್ದಾರೆ. ಪೆಟ್ರೋಲ್, ಗ್ಯಾಸ್, ಆಹಾರವಸ್ತುಗಳು ಸೇರಿದಂತೆ ಅಗತ್ಯ ವಸ್ತುಗಳ ಬೆಲೆಗಳು ಇನ್ನೂ ಹೆಚ್ಚಾಗಿದೆ. ಅವರು ಹೇಳಿದ ಅಚ್ಛೇ ದಿನ್ ಬರಲೇ ಇಲ್ಲ. 2014ರಲ್ಲಿ ಒಂದು ಡಾಲರ್ ಬೆಲೆ 58 ರೂ. ಇತ್ತು, ಇಂದು 83 ರೂ. ಆಗಿದೆ. ರೂಪಾಯಿ ಮೌಲ್ಯ ಮತ್ತಷ್ಟು ಕುಸಿದಿದ್ದು, ರೂಪಾಯಿ ಮೌಲ್ಯ ಹೆಚ್ಚಿಸುವ ಅವರ ಭರವಸೆ ಮೋದಿಯ ಮತ್ತೊಂದು ಸುಳ್ಳಾಗಿದೆ. ಮೇಲಿನ ಐದೂ ಭರವಸೆಗಳನ್ನು ಸುಳ್ಳಾಗಿಸಿರುವ ನರೇಂದ್ರ ಮೋದಿಯವರಿಗೆ ಜನರು ಮತ ನೀಡಬೇಕೇ ? ಸುಳ್ಳು ಹೇಳಿದ ನರೇಂದ್ರ ಮೋದಿಗೆ ಈ ಬಾರಿ ಮತ ನೀಡಬಾರದು ಎಂದು ಜನರಿಗೆ ಕರೆ ನೀಡಿದರು. ರಾಜ್ಯಕ್ಕೆ ಬರಪರಿಹಾರ ಬಂದಿಲ್ಲ: ಕಳೆದ ಬಾರಿ ರಾಜ್ಯದಿಂದ ಬಿಜೆಪಿಯ 25 ಸಂಸದರು ಇದ್ದರೂ, ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ಬಗ್ಗೆ ಕೇಂದ್ರದಲ್ಲಿ ಎಂದೂ ಧ್ವನಿ ಎತ್ತಲಿಲ್ಲ. ಕಾಂಗ್ರೆಸ್ ನ ಸಂಸದ ಡಿ.ಕೆ.ಸುರೇಶ್ ಒಬ್ಬರೇ ಕೇಂದ್ರದ ವಿರುದ್ಧ ಧ್ವನಿ ಎತ್ತಿದ್ದವರು. ತೆರಿಗೆ ಹಂಚಿಕೆಯಲ್ಲಿ ಅನ್ಯಾಯ ಮಾಡಿದೆ. ರಾಜ್ಯದ 223 ತಾಲ್ಲೂಕುಗಳಲ್ಲಿ ಬರಗಾಲವಿದ್ದರೂ ಕೇಂದ್ರ ಬರ ಪರಿಹಾರ ನೀಡಲಿಲ್ಲ ಎಂದರು.

ಹಾಸನ ಯುವರಾಜಕಾರಣಿ ಕಾಮಪುರಾಣ 'ಪೆನ್‌ಡ್ರೈವ್'!

ಎಸ್‌ಐಟಿ ರಚಿಸಲು ಸಿಎಂಗೆ ಮಹಿಳಾ ಆಯೋಗ ಮನವಿ

■ ಕಾಯಕಯೋಗಿ ಸುದ್ದಿ

ಬೆಂಗಳೂರು : ರಾಜ್ಯದ ರಾಜಕೀಯ ವಲಯದಲ್ಲಿ ಭಾರೀ ಸುದ್ದಿ ಮಾಡುತ್ತಿರುವ ಹಾಸನದ ಪೆನ್‌ಡ್ರೈವ್ ಬಗ್ಗೆ ಮಹಿಳಾ ಆಯೋಗ ಅಧಿಕೃತ ಹೇಳಿಕೆ ನೀಡಿದ್ದು, "ಹಾಸನದ ಪೆನ್‌ಡ್ರೈವ್ ನಮ್ಮ ಕಚೇರಿಗೂ ತಲುಪಿದೆ" ಎಂದು ತಿಳಿಸಿದೆ.

ಬೆಂಗಳೂರಿನ ಕಾವೇರಿ ಭವನದಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ, "ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವಿಡಿಯೋಗಳು ಇರುವ ಪೆನ್ ಡ್ರೈವ್ ಮಹಿಳಾ ಆಯೋಗದ ಕಚೇರಿಗೂ ತಲುಪಿದೆ. ದೇಶದಲ್ಲೇ ತಲೆ ತಗ್ಗಿಸುವ ಘಟನೆ ಇದು. ಹೆದರಿಸಿ, ನಂಬಿಸಿ ಈ ವಿಡಿಯೋ ಮಾಡಲಾಗಿದೆ. ಈವರೆಗೆ ಮಹಿಳಾ ಆಯೋಗಕ್ಕೆ ಸಂತ್ರಸ್ತರು ಯಾರು ಕೂಡ ಬಂದಿಲ್ಲ. ಆದರೂ ಎರಡು ದೂರುಗಳು ಬಂದಿದೆ. ಈ ಬಗ್ಗೆ ಎಸ್‌ಐಟಿ ರಚಿಸಲು ಸಿಎಂಗೆ ಮನವಿ ಮಾಡಲಾಗಿದೆ" ಎಂದು ತಿಳಿಸಿದರು.



"ಹರಿದಾಡುತ್ತಿರುವ ಪೆನ್‌ಡ್ರೈವ್‌ನಲ್ಲಿ ಮಹಿಳೆಯರ ಮೇಲೆ ನಡೆಸಲಾಗುತ್ತಿರುವ ಲೈಂಗಿಕ ಹಿಂಸೆಯ ಕುರಿತು ಮತ್ತು ಸಾವಿರಾರು ಅಮಾಯಕ ಹೆಣ್ಣು ಮಕ್ಕಳನ್ನು ಲೈಂಗಿಕ ಕ್ರಿಯೆಗೆ ಬಳಸಿಕೊಂಡು, ಮೊಬೈಲ್‌ನಲ್ಲಿ ಖಾಸಗಿ ವಿಡಿಯೋವನ್ನು ಚಿತ್ರೀಕರಿಸಿಕೊಂಡು, ಬ್ಲಾಕ್‌ಮೇಲ್ ಮಾಡುತ್ತಿರುವುದಾಗಿ ಸಮೂಹ ಮಾಧ್ಯಮಗಳಲ್ಲಿ ಪ್ರಚಾರವಾಗಿರುತ್ತದೆ. ಅಲ್ಲದೇ ಪ್ರಭಾವಿ ರಾಜಕಾರಣಿಗಳು ಅನೇಕ ಮಹಿಳೆಯರನ್ನು ಲೈಂಗಿಕವಾಗಿ ಬಳಸಿಕೊಳ್ಳುತ್ತಿರುವ, ಕೆಲವರ ಮೇಲೆ ಅತ್ಯಾಚಾರ ಸಹ ಮಾಡಿರುವ ತಂಡಗಳ ಕುರಿತು ಸಹ ಪೆನ್‌ಡ್ರೈವ್‌ಗಳು ಈಗ ಜನ ಸಾಮಾನ್ಯರ ಕೈಗೆ ಸಿಕ್ಕಿ ಇಡೀ ಸಮಾಜ ತಲೆ ತಗ್ಗಿಸುವ ಸ್ಥಿತಿ ನಿರ್ಮಾಣವಾಗಿದೆ" ಎಂದು ನಾಗಲಕ್ಷ್ಮಿ ಚೌಧರಿ ಬೇಸರ ವ್ಯಕ್ತಪಡಿಸಿದ್ದಾರೆ.

"ಮಹಿಳೆಯರ ಬದುಕು ಹಾಗೂ ಘನತೆಯನ್ನು ನಾಶ ಮಾಡುತ್ತಿರುವ ಬಗ್ಗೆ ಸಮೂಹ ಮಾಧ್ಯಮಗಳಲ್ಲಿ ಹಾಗೂ ದಿನಪತ್ರಿಕೆಗಳಲ್ಲಿ ಪ್ರಕಟವಾಗುತ್ತಿದೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲೂ ಸಹ ಈ ವಿಷಯಕ್ಕೆ ಸಂಬಂಧಿಸಿದಂತೆ ಹಲವಾರು ಸಂಘಟನೆಗಳಿಂದ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿಗಳು ಸ್ವೀಕೃತವಾಗಿದೆ. ಎಸ್‌ಡಿಪಿಐ ಹಾಗೂ ಮಹಿಳಾ ದೌರ್ಜನ್ಯ ವೇದಿಕೆಯವರು ಈಗಾಗಲೇ ಲಿಖಿತ ದೂರು ನೀಡಿದ್ದಾರೆ. ವಿಡಿಯೋ ಮಾಡಿದವರು, ವೈರಲ್ ಮಾಡಿದವರ ವಿರುದ್ಧವೂ ಸೂಕ್ತ ಕ್ರಮಕ್ಕೆ ಆಯೋಗವು ಪೊಲೀಸ್ ಇಲಾಖೆಗೆ ಸೂಚನೆ ನೀಡಿದೆ" ಎಂದು ಆಯೋಗದ ಅಧ್ಯಕ್ಷೆ ತಿಳಿಸಿದ್ದಾರೆ.

"ಹಲವು ಮಹಿಳೆಯರನ್ನು ಬಲವಂತದಿಂದ ಲೈಂಗಿಕ ಕ್ರಿಯೆಗೆ ಒತ್ತಾಯಪಡಿಸುವ ಮೂಲಕ ಚಿತ್ರೀಕರಿಸಲಾಗಿದೆ ಎನ್ನಲಾಗುತ್ತಿದ್ದು, ಚಿತ್ರೀಕರಣ ಮಾಡಿದ ವ್ಯಕ್ತಿ ಮತ್ತು ಅದನ್ನು ಸಾರ್ವಜನಿಕರೊಳಿದ ವ್ಯಕ್ತಿಯನ್ನು ತನಿಖೆಗೆ ಒಳಪಡಿಸುವ ಮೂಲಕ ಮಹಿಳೆಯರ ಘನತೆ ಹಾಗೂ ಆಸ್ತಿತ್ವಕ್ಕೆ ಹಾನಿ ಉಂಟು ಮಾಡುತ್ತಿರುವವರನ್ನು ಶೀಘ್ರವಾಗಿ ಪತ್ತೆಹಚ್ಚಲು ವಿಶೇಷ ತನಿಖಾ ತಂಡವನ್ನು ರಚಿಸಲು ಆದೇಶ ನೀಡಬೇಕು ಎಂದು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದೇನೆ ಮತ್ತು ಆರೋಪಿಗಳ ವಿರುದ್ಧ ಕಠಿಣ ಕಾನೂನಾತ್ಮಕ ಕ್ರಮ ಕೈಗೊಳ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–2 | 26–04–2024

ಮಂಡ್ಯ

ಶ್ರೀರಾಮ ಪಟ್ಟಾಭಿಷೇಕ: ಸಾಂಸ್ಕೃತಿಕ ಕಾರ್ಯಕ್ರಮಗಳು

■ ಕಾಯಕಯೋಗಿ ಸುದ್ದಿ

ಮಂಡ್ಯ: ನಗರದ ನೆಹರು ನಗರದ ಶ್ರೀರಾಮ ಭಜನಾ ಸೇವಾ ಮಂಡಳಿಯ 41ನೇ ವರ್ಷದ ಶ್ರೀರಾಮನವಮಿಯನ್ನು ಅದ್ಧೂರಿಯಾಗಿ ನಡೆಸುತ್ತಿದ್ದು, ಗುರುವಾರ ಶ್ರೀರಾಮ ಪಟ್ಟಾಭಿಷೇಕ ಮಹೋತ್ಸವವನ್ನು ವಿಜೃಂಭಣೆಯಿಂದ ನಡೆಸಲಾಯಿತು.

ಶ್ರೀಅನಂತ ನಾರಾಯಣ ಶಾಸ್ತ್ರಿಗಳ ನೇತೃತ್ವದಲ್ಲಿ ಶ್ರೀರಾಮ ತಾರಕ ಜಪ, ಪೂಜಾ ವಿಧಿ ವಿಧಾನಗಳನ್ನು ಶಾಸ್ತ್ರೋಕ್ತವಾಗಿ ನಡೆಸಲಾಯಿತು.

ಶ್ರೀರಾಮ ನವಮಿಯ ಅಂಗವಾಗಿ ಕಳೆದ 8 ದಿನಗಳಿಂದ ಭಜನೆ, ಗಮಕ ವಾಚನ, ಭಕ್ತಿ ಸಂಗೀತ ಕಾರ್ಯಕ್ರಮಗಳು ನಡೆದಿದ್ದು ಗುರುವಾರ ಸಂಜೆ ಮಂಡ್ಯದ ಸಹೋದರಿ ಜಯಲಕ್ಷ್ಮಿ ಮತ್ತು ಹೇಮಲತಾ ಅವರ ತಂಡದ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ನಡೆಯಿತು.

ಶುಕ್ರವಾರ ಹನುಮಂತೋತ್ಸವ ಏರ್ಪಡಿಸಲಾಗಿದೆ ಎಂದು ಭಜನಾ ಸಭಾದ ಕಾರ್ಯದರ್ಶಿ ವಿಶ್ವನಾಥ ಬಾಬು ತಿಳಿಸಿದ್ದಾರೆ.



ಡಾ.ರಾಜ್ ಜನ್ಮದಿನಾಚರಣೆ

ಮಂಡ್ಯ: ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲೆ, ತಾಲ್ಲೂಕು ಮತ್ತು ನಗರ ಘಟಕದ ವತಿಯಿಂದ ಕನ್ನಡದ ಮೇರುನಟ ಪದ್ಮವಿಭೂಷಣ ಡಾ.ರಾಜಕುಮಾರ್ ಅವರ 95ನೇ ಜನ್ಮದಿನವನ್ನು ಆಚರಿಸಲಾಯಿತು.

ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿರುವ ಡಾ.ರಾಜಕುಮಾರ್ ಪ್ರತಿಮೆಗೆ ಕಸಾಪ ಪದಾಧಿಕಾರಿಗಳು ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಜೆ. ಧನಂಜಯ ದರಸಗುಪ್ಪೆ, ತಾ.ಕ.ಸಾ.ಪ ಅಧ್ಯಕ್ಷರಾದ ಚಿಂದ್ರಲಿಂಗ(ಮಂಡ್ಯ), ಬಲ್ಲೇನಹಳ್ಳಿ ಮಂಜುನಾಥ (ಶ್ರೀರಂಗಪಟ್ಟಣ), ಸುಜಾತ ಕೃಷ್ಣ (ನಗರ ಘಟಕ), ಕ.ಸಾ.ಪ. ಸದಸ್ಯರಾದ ಕೋಳಾ, ರತ್ನ ಶಿವಣ್ಣ, ಶಶಿಮಣಿ, ಶಶಿಧರ ಸಬ್ಬನಹಳ್ಳಿ, ಮಂಚಶೆಟ್ಟಿ, ಎಂ.ಪೂರ್ಣಚಂದ್ರ ಇತರರಿದ್ದರು.

ಶಾಂತಿಯುತ ಮತದಾನಕ್ಕೆ ಮುಂಜಾಗ್ರತಾ ಕ್ರಮ

ಮದ್ದೂರು: ಮಂಡ್ಯ ಲೋಕಸಭಾ ಕ್ಷೇತ್ರದ ಮದ್ದೂರು ವಿಧಾನ ಸಭಾ ವ್ಯಾಪ್ತಿಯ 254 ಮತಗಟ್ಟೆಗಳಲ್ಲಿ ಶಾಂತಿಯುತ ಮತದಾನಕ್ಕೆ ಅಗತ್ಯ ಮುಂಜಾಗ್ರತಾ ಕ್ರಮಗಳೊಟ್ಟಿಗೆ ಆಯಾ ಮತಗಟ್ಟೆಗಳಿಗೆ ಸಿಬ್ಬಂದಿ ನಿಯೋಜನೆಗೂ ಈಗಾಗಲೇ ಕ್ರಮವಹಿಸಿರುವುದಾಗಿ ಸಹಾಯಕ ಚುನಾವಣಾಧಿಕಾರಿ ಕೆ.ಲೋಕನಾಥ್ ತಿಳಿಸಿದರು.

ಕ್ಷೇತ್ರದಲ್ಲಿ 2.15.745 ಮತದಾರರಿದ್ದು ಈವೈಕ 10.4280 ಪುರುಷ 111.443 ಮಹಿಳಾ ಇತರೆ 22 ಮಂದಿ ಮತದಾರರನ್ನು ಹೊಂದಿರುವುದಾಗಿ ಹೇಳಿದರು.

254 ಮತಗಟ್ಟೆಗಳು : ಒಟ್ಟು 254 ಮತಗಟ್ಟೆಗಳ ಪೈಕಿ 24 ಪಟ್ಟಣ, 230 ಗ್ರಾಮಾಂತರ ಭಾಗದಲ್ಲಿದ್ದು 5 ಪಿಂಕ್, 2 ಎಕ್ಸಿಕ್, 2 ಯಿವ, ಹಾಗೂ 1 ವಿಶೇಷಚೇತನ ಮತಗಟ್ಟೆಗಳನ್ನು ತೆರೆದಿರುವುದಾಗಿ ಹೇಳಿದರು.



187 ಸಾಮಾನ್ಯ ಮತಗಟ್ಟೆ ಪೈಕಿ 67 ಅತಿ ಸೂಕ್ಷ್ಮ, 4 ದುರ್ಬಲ, ವಿಧಾನಸಿರುವುದಾಗಿ ತಿಳಿಸಿದ್ದು ಒಟ್ಟು 254 ಮತಗಟ್ಟೆ ಅಧಿಕಾರಿಗಳು, 254 ಸಹಾಯಕ ಅಧಿಕಾರಿಗಳು, 254 ಪೋಲಿಂಗ್ ಅಧಿಕಾರಿಗಳು, ಸೂಕ್ಷ್ಮ ವೀಕ್ಷಕರಾಗಿ 40 ಮಂದಿ ಸಿಬ್ಬಂದಿಯನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾಗಿದೆ ಎಂದರು.

ರವಾನೆ : ಮದ್ದೂರು ಕ್ಷೇತ್ರ ವ್ಯಾಪ್ತಿಯ ಮತಗಟ್ಟೆಗಳಲ್ಲಿ ನಿಯೋಜಿತ ಸಿಬ್ಬಂದಿಯೊಂದಿಗೆ ವಿದ್ಯುನ್ಮಾಯಂತ್ರಗಳನ್ನೊಟ್ಟಿಗೆ ಇತರೆ ಪರಿಕರಗಳ ರವಾನೆಗೆ ಗುರುವಾರ ಬೆಳಿಗ್ಗಿನಿಂದಲೇ ಪಟ್ಟಣದ ಎಚ್.ಕೆ. ವೀರಣ್ಣಗೌಡ ಕಾಲೇಜು ಆವರಣದಲ್ಲಿ ಚುನಾವಣಾಧಿಕಾರಿಗಳ ನೇತೃತ್ವದ ಸಿಬ್ಬಂದಿಗಳ ತಂಡ ವ್ಯವಸ್ಥಿತವಾಗಿ ಕ್ರಮವಹಿಸಿದರು.

ಭದ್ರತಾ ಸಿಬ್ಬಂದಿ :ಒರ್ ಡಿವೈಎಸ್‌ಪಿ, 3 ಮಂದಿ ವೃತ್ತ ನಿರೀಕ್ಷಕರು, 9 ಮಂದಿ ಪಿಎಸ್‌ಐ, 188 ಪೊಲೀಸ್ ಸಿಬ್ಬಂದಿ, ಸೇರಿದಂತೆ 172 ಮಂದಿ ಗೃಹರಕ್ಷಕದಳ ಹಾಗೂ 40 ಮಂದಿ ಗುಜರಾತ್‌ನ ಎಸ್.ಎಸ್.ಬಿ ಸಿಬ್ಬಂದಿ ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದಾರೆ.

ಚುನಾವಣಾ ಕರ್ತವ್ಯಕ್ಕೆ 56 ಮಾರ್ಗಗಳಿದ್ದು, 37 ಬಸ್ಸು 6 ಟಿಂಬೊ, 11 ಜೀಪು, 2 ಮಿನಿ ಬಸ್‌ಗಳನ್ನು ನಿಯೋಜಿಸಿದ್ದು ಕ್ಷೇತ್ರಕ್ಕೆ ಒಟ್ಟು 325 ಬಿಯಿಗಳು, 325 ಸಿಯಿಗಳು, ಮತ್ತು 343 ವಿವಿ ಪ್ಯಾಟ್‌ಗಳನ್ನು ಹಂಚಿಕೆ ಮಾಡಲಾಗಿದ್ದು ಈ ಪೈಕಿ 254 ಶಟ್‌ಗಳನ್ನು ಮತದಾನಕ್ಕೆ ಅಯ್ಕೆಮಾಡಲಾಗಿದ್ದು ಉಳಿದ ಮತಯಂತ್ರಗಳನ್ನು ಹೆಚ್ಚುವರಿಯಾಗಿ ಬಳಕೆ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದರು. ಈ ವೇಳೆ ಮದ್ದೂರು ತಹಸೀಲ್ದಾರ್ ಕೆ.ಎಸ್ ಸೋಮಶೇಖರ್, ಚುನಾವಣಾ ಶಿರಸ್ತೇದಾರ್ ರೂಪ, ಅಧಿಕಾರಿಗಳಾದ ಸಿ.ಜಿ.ಕಾಳೀರಯ್ಯ, ಕರಿಬಸವಯ್ಯ, ರೇಖಾ, ಪವನ್‌ಕುಮಾರ್ ಇತರರಿದ್ದರು.

ರೋಗಿಗಳಿಗೆ ಮತದಾನ ಮಾಡಲು ಉಚಿತ ಆಂಬುಲೆನ್ಸ್ ವ್ಯವಸ್ಥೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಕೆ.ಎಂ. ದೊಡ್ಡಿಯಲ್ಲಿರುವ ಆಸ್ಪರ್ ಜಿ. ಮಾದೇಗೌಡ ಆಸ್ಪತ್ರೆ ವತಿಯಿಂದ ಆಸ್ಪತ್ರೆಯಲ್ಲಿ ಒಳ ರೋಗಿಗಳಾಗಿ ದಾಖಲಾಗಿರುವವರಿಗೆ ಮತದಾನ ಮಾಡಲು ಉಚಿತ ಆ್ಯಂಬುಲೆನ್ಸ್ ವ್ಯವಸ್ಥೆ ಮಾಡಲಾಗಿದೆ.

ಪ್ರಜಾಪ್ರಭುತ್ವದಲ್ಲಿ ಮತದಾನಕ್ಕೆ ಹೆಚ್ಚಿನ ಆದ್ಯತೆ ಇದೆ. ಈ ಹಿನ್ನೆಲೆಯಲ್ಲಿ ಮತದಾನ ಮಾಡುವುದು ಪ್ರತಿಯೊಬ್ಬರ ಹಕ್ಕು. ಇದನ್ನು ಗಮನದಲ್ಲಿಟ್ಟುಕೊಂಡು ಆಸ್ಪತ್ರೆಯ ಒಳ ರೋಗಿಗಳಿಗೆ ಮತದಾನ ಮಾಡಲು ಉಚಿತವಾಗಿ ಆ್ಯಂಬುಲೆನ್ಸ್ ಸೇವೆಯನ್ನು ಒದಗಿಸಲಾಗುತ್ತಿದೆ.

ಒಳ ರೋಗಿಯ ಸುರಕ್ಷತೆಯ ದೃಷ್ಟಿಯಿಂದ ವೈದ್ಯರು ಅಥವಾ ದಾದಿಯರೊಡನೆ ಕಳುಹಿಸಿ ಮತ ಚಲಾಯಿಸಿದ ನಂತರ ರೋಗಿಯನ್ನು ಮತ್ತೆ ಆಸ್ಪತ್ರೆಗೆ ಸುರಕ್ಷಿತವಾಗಿ ಮರಳಿ ಕರೆತರಲಾಗುವುದು ಎಂದು ಆಸ್ಪತ್ರೆಯ ಮುಖ್ಯಸ್ಥ ಪಿ.ಎಸ್.ಗಮೇಶಪ್ರಭು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಏ.29 ರಿಂದ ದ್ವಿತೀಯ ಪಿಯುಸಿ ಪರೀಕ್ಷೆ–2 :ಡಾ ಎಚ್ ಎಲ್ ನಾಗರಾಜು

■ ಕಾಯಕಯೋಗಿ ಸುದ್ದಿ

ಮಂಡ್ಯ: ಜಿಲ್ಲೆಯಲ್ಲಿ ಏ.29 ರಿಂದ ಮೇ 16 ರವರೆಗೆ ದ್ವಿತೀಯ ಪಿಯುಸಿ ಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ದ್ವಿತೀಯ ಪಿಯುಸಿ ಪರೀಕ್ಷೆ –2 ನಡೆಯಲಿದೆ. ಮೊದಲನೇ ಪರೀಕ್ಷೆ ನಡೆದ ರೀತಿಯಲ್ಲೆ ಪಾರದರ್ಶಕವಾಗಿ ಪ್ರಾಮಾಣಿಕವಾಗಿ ಪರೀಕ್ಷೆ ನಡೆಯಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಎಚ್.ಎಲ್.ನಾಗರಾಜ್ ಮಾತಾನಾಡಿದರು.

ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಜಿಲ್ಲೆಯಲ್ಲಿ 2024 ರಲ್ಲಿ ದ್ವಿತೀಯ ಪಿಯುಸಿಯಲ್ಲಿ ಅನುತ್ತೀರ್ಣರಾದವರ ರಿಗೆ ಪರೀಕ್ಷೆ ನಡೆಸುವ ಕುರಿತು ಪೂರ್ವಭಾವಿ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯ 08 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಜಿಲ್ಲೆಯ ಎಲ್ಲಾ 08 ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮರಾದ ಕಣ್ಗಾವಲಿನಲ್ಲಿ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಪರೀಕ್ಷೆಯನ್ನು ವೆಬ್ ಕಾಸ್ಟಿಂಗ್ ಸಹ ಮಾಡಲಾಗುವುದು ಎಂದು ಹೇಳಿದರು.

ಪರೀಕ್ಷೆಯು ಕೆ. ಆರ್ ಪೇಟೆ ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗಮಂಗಲ ಸರ್ಕಾರಿ ಪದವಿ ಪೂರ್ವ ಕಾಲೇಜು , ಶ್ರೀರಂಗ ಪಟ್ಟಣ ಸರ್ಕಾರಿ ಪದವಿ ಪೂರ್ವ ಕಾಲೇಜು , ಮಂಡ್ಯ ಬಾಲಕಿಯರ ಸರ್ಕಾರಿ ಪದವಿ ಪೂರ್ವ (ಕಲ್ಲು ಕಟ್ಟಡ) ಕಾಲೇಜು, ಮಂಡ್ಯ ಸರ್ಕಾರಿ ಪದವಿ ಪೂರ್ವ ಕಾಲೇಜು(ಮಾಜಿ ಪುರಭವಿ), ಮದ್ದೂರು ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಪಾಂಡವಪುರ ಸರ್ಕಾರಿ ಪದವಿ ಪೂರ್ವ ಕಾಲೇಜು, ಮಳವಳ್ಳಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪರೀಕ್ಷೆಗಳು ನಡೆಯಲಿದೆ.

ಪರೀಕ್ಷೆಯು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀ ಸುತ್ತಳತೆಯಲ್ಲಿ 144ನೇ ಕಲಂ ಜಾರಿಗೊಳಿಸಿ ಬೇಕು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಬೇಕು ಎಂದರು.

ಜಿಲ್ಲಾ ಖಜಾನೆಯಿಂದ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆ ವಿತರಿಸಲು



ಪ್ರಶ್ನೆಪತ್ರಿಕೆ ಮಾರ್ಗಾಧಿಕಾರಿ ತಂಡಗಳಿಗೆ ಅಗತ್ಯವಿರುವ ವಾಹನಗಳ ಸೌಕರ್ಯವನ್ನು ಒದಗಿಸುವುದು ಎಂದರು.

ವಿಶೇಷ ಪ್ರಶ್ನೆಪತ್ರಿಕೆ ಪಾಲಕರಾಗಿ ನೇಮಕಗೊಂಡಿರುವ ಅಧಿಕಾರಿಗಳು ಬಯೋ ಮೆಟ್ರಿಕ್‌ನಲ್ಲಿ ಮಾಹಿತಿಯನ್ನು ನೊಂದಾಯಿಸಿ ಕೊಂಡು ಖಿದ್ದು ಜಿಲ್ಲಾ ಖಜಾನೆಯಿಂದ ಪರೀಕ್ಷಾ ಗೌಪ್ಯ ವಸ್ತುಗಳನ್ನು ಸ್ವೀಕರಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಿಗೆ ಸರಿಯಾದ ಸಮಯದಲ್ಲಿ ತಲುಪಿಸಬೇಕು ಎಂದರು.

ಪರೀಕ್ಷಾ ದಿನಗಳಂದು 'ಪ್ರಶ್ನೆಪತ್ರಿಕೆ ವಿತರಕರ' ತಂಡದ ಬೆಂಗಾವಲಿಗೆ ಸಶಸ್ತ್ರ ಪೊಲೀಸ್ ಸಿಬ್ಬಂದಿಯನ್ನು ನೇಮಿಸಲಾಗು ವುದು ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ಮುಖ್ಯ ಅಧೀಕ್ಷಕರುಗಳನ್ನು ಹೊರತುಪಡಿಸಿ ಕೊಠಡಿ ಮೇಲ್ವಿಚಾರಕರು ಹಾಗೂ ಇತರೆ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಮೊಬೈಲ್ ಇತ್ಯಾದಿ ಇಲೆಕ್ಟ್ರಾನಿಕ್ ಸಾಧನಗಳನ್ನು ಬಳಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದರು.

ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ, ಸೂಕ್ತ ಆಸನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸಬೇಕು ಎಂದರು.

ಜಿಲ್ಲೆಯಲ್ಲಿ ಯಾವುದೇ ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಪರೀಕ್ಷಾ ಕೇಂದ್ರಗಳು ಇರುವುದಿಲ್ಲ. ಪರೀಕ್ಷೆಗಳನ್ನು ಯಶಸ್ವಿಕ್ರಮದಂತೆ ಜರುಗಿಸಲು ಆಯಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಸವಿವರವಾದ ಮಾರ್ಗಸೂಚಿಯನ್ನು ಕಳುಹಿಸಲಾಗಿದೆ ಹಾಗೂ ಕೊಠಡಿಕ್ಕೆ ಅಗತ್ಯ ಸಹಕಾರ ಹಾಗೂ ಮಾರ್ಗದರ್ಶನಗಳನ್ನು ಒದಗಿಸಲು ಇಲಾಖೆಯ ವತಿಯಿಂದ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದರು.

ಸಭೆಯಲ್ಲಿ , ಪದವಿಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಸಿ. ಚೆಲುವಯ್ಯ, ಪದವಿ ಪೂರ್ವ ಶಿಕ್ಷಣ ಇಲಾಖೆಯ ರಾಜೇಗೌಡ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಎಸ್ ಎಚ್ ನಿರ್ಮಲ ಅವರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಅಂತಿಮ ಮತದಾರರ ಪಟ್ಟಿ ಪ್ರಕಟ: 17,75,243 ಮತದಾರರು

■ ಕಾಯಕಯೋಗಿ ಸುದ್ದಿ

ಮಂಡ್ಯ : ಮಂಡ್ಯ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಸಂಬಂಧಿಸಿದಂತೆ ಏಪ್ರಿಲ್ 4 ರಂದು ಪ್ರಕಟವಾಗಿರುವ ಅಂತಿಮ ಮತದಾರರ ಪಟ್ಟಿಯಂತೆ 17,79,243 ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ:ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾ ಗೋಷ್ಠಿ ನಡೆಸಿ ಮಾತನಾಡಿದರು. ಮಳವಳ್ಳಿಯಲ್ಲಿ ಗಂಡು–126118 ಹೆಣ್ಣು–127487, ತೃತೀಯ ಲಿಂಗಿಗಳು–23, ಒಟ್ಟು 253628 ಮತದಾರರಿದ್ದಾರೆ. ಮದ್ದೂರಿನಲ್ಲಿ ಗಂಡು–104280, ಹೆಣ್ಣು–111443, ತೃತೀಯ ಲಿಂಗಿಗಳು–22, ಒಟ್ಟು 215745 ಮತದಾರರಿದ್ದಾರೆ ಮೇಲುಕೋಟೆಯಲ್ಲಿ ಗಂಡು–100379, ಹೆಣ್ಣು–103010, ತೃತೀಯ ಲಿಂಗಿಗಳು–9, ಒಟ್ಟು 203398 ಮತದಾರರಿದ್ದಾರೆ. ಮಂಡ್ಯದಲ್ಲಿ ಗಂಡು–111868, ಹೆಣ್ಣು–117759, ತೃತೀಯ ಲಿಂಗಿಗಳು– 36, ಒಟ್ಟು 229663 ಮತದಾರರಿದ್ದಾರೆ. ಶ್ರೀರಂಗಪಟ್ಟಣ ಗಂಡು–106157, ಹೆಣ್ಣು–111431, ತೃತೀಯ ಲಿಂಗಿಗಳು– 44, ಒಟ್ಟು 217632 ಮತದಾರರಿದ್ದಾರೆ. ನಾಗಮಂಗಲದಲ್ಲಿ ಗಂಡು–107760, ಹೆಣ್ಣು–108783, ತೃತೀಯ ಲಿಂಗಿಗಳು–11, ಒಟ್ಟು 216554 ಮತದಾರರಿದ್ದಾರೆ. ಕೃಷ್ಣರಾಜಪೇಟೆಯಲ್ಲಿ ಗಂಡು–111542 ಹೆಣ್ಣು–112284 ತೃತೀಯ ಲಿಂಗಿಗಳು– 11, ಒಟ್ಟು 223837 ಮತದಾರರಿದ್ದಾರೆ. ಕೆ.ಆರ್.ನಗರದಲ್ಲಿ ಗಂಡು–108008, ಹೆಣ್ಣು–110766, ತೃತೀಯ ಲಿಂಗಿಗಳು– 12, ಒಟ್ಟು 218786 ಮತದಾರರಿದ್ದಾರೆ.

2076 ಮತಗಟ್ಟೆಗಳು: ಮತದಾನಕ್ಕಾಗಿ 2076 ಮತಗಟ್ಟೆಗಳನ್ನು ಸಿದ್ಧಪಡಿಸಲಾಗಿದ್ದು, ಎಲ್ಲಾ ರೀತಿಯ ಮೂಲಭೂತ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ಮಳವಳ್ಳಿ– 272, ಮದ್ದೂರು–254, ಮೇಲುಕೋಟೆ–264, ಮಂಡ್ಯ–264, ಶ್ರೀರಂಗಪಟ್ಟಣ–249, ನಾಗಮಂಗಲ–260, ಕೃಷ್ಣರಾಜಪೇಟೆ–261, ಕೆ. ಆರ್ ನಗರ–252 ಮತಗಟ್ಟೆಗಳವೆ ಎಂದರು.

1120 ಮತಗಟ್ಟೆಗಳಲ್ಲಿ ವೆಬ್ ಕ್ಯಾಸ್ಟಿಂಗ್: ಮಳವಳ್ಳಿ–137, ಮದ್ದೂರು – 127, ಮೇಲುಕೋಟೆ – 192, ಮಂಡ್ಯ – 131, ಶ್ರೀರಂಗಪಟ್ಟಣ – 125, ನಾಗಮಂಗಲ – 150, ಕೃಷ್ಣರಾಜಪೇಟೆ – 132, ಕೆ. ಆರ್. ನಗರ – 126, ಒಟ್ಟು – 1120 ಮತಗಟ್ಟೆಗಳಲ್ಲಿ ವೆಬ್ ಕಾಸ್ಟಿಂಗ್ ಅನ್ನು ಅಳವಡಿಸಲಾಗುವುದು ಎಂದರು.

ಮತದಾನವು ಏಪ್ರಿಲ್ 26 ರಂದು ನಡೆಯಲಿದ್ದು, ಸ್ಥಳೀಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಮತದಾರರಲ್ಲದ ರಾಜಕೀಯ ಮುಖಂಡರು, ಕಾರ್ಯಕರ್ತರು, ಸ್ಟಾರ್ ಕ್ಯಾಂಪೇನರ್ಸ್‌ಗಳು, ಮೆರವಣಿಗೆ ಆಯೋಜಕರು ಸೇರಿದಂತೆ ಮತ್ತಿತರರು ಏ.24 ರಂದು ಸಂಜೆ 6 ಗಂಟೆಗೆ ಕ್ಷೇತ್ರ ಬಿಡಬೇಕೆಂದು ಈಗಾಗಲೇ ಸಂಬಂಧಪಟ್ಟ ಸಹಾಯ ಚುನಾವಣಾ ಅಧಿಕಾರಿಗಳಿಗೆ ಮತ್ತು ಆಯಾ ಠಾಣಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಮತದಾನದ ಕೊನೆಯ 48 ಗಂಟೆ ಅವಧಿಗೆ ಒಬ್ಬ ಅಭ್ಯರ್ಥಿಗೆ ಮೂರು ವಾಹನಗಳು ಮಾತ್ರ ಬಳಕೆಗೆ ಅವಕಾಶವಿರುತ್ತದೆ. ಅಭ್ಯರ್ಥಿಯ ಅನುಪಸ್ಥಿತಿಯಲ್ಲಿ ಅಭ್ಯರ್ಥಿಗೆ ನೀಡಿದ ವಾಹನವನ್ನು ಇತರರು ಉಪಯೋಗಿಸುವಂತಿಲ್ಲ. ಅನುಮತಿಸಿದ ವಾಹನಗಳಲ್ಲಿ ಐದು ಜನಕ್ಕಿಂತ ಹೆಚ್ಚು ಜನರು ಪ್ರಯಾಣಿಸತಕ್ಕದ್ದಲ್ಲ. ಈ ಅವಧಿಯಲ್ಲಿ 5 ಜನಕ್ಕಿಂತ ಹೆಚ್ಚಿನ ಜನ ಸೇರದಂತೆ ಸಿ.ಆರ್. ಪಿ.ಸಿ ಕಲಂ 144 ರಡಿ ನಿಷೇಧಾಜ್ಞೆ ಹೊರಡಿಸಲಾಗಿದೆ ಎಂದರು.

ಮತಗಟ್ಟೆಯ 100 ಮೀಟರ್ ಅಂತರ ದೊಳಗೆ ಮೊಬೈಲ್ ಬಳಕೆ ನಿಷೇಧವಿದೆ ಹಾಗೂ ಎಲ್ಲಾ ರೀತಿಯ ಪ್ರಚಾರ ನಿಬರ್ಂಧಿಸಿದೆ. ಮತಗಟ್ಟೆಯಿಂದ 200 ಮೀ. ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಪಕ್ಷಗಳ ಟೆಂಟ್‌ಗಳನ್ನು ತೆರೆಯುವಂತಿಲ್ಲ ಹಾಗೂ ಮತಗಟ್ಟೆಯ 200 ಮೀ. ನಿಂದ ಹೊರಗೆ ತಾತ್ಕಾಲಿಕ ಬೂತ್ ತೆರೆಯಲು ಬಯಸಿದ್ದಲ್ಲಿ ಸ್ಥಳೀಯ ಪ್ರಾಧಿಕಾರದಿಂದ ಹಾಗೂ ಸಂಬಂಧಪಟ್ಟ ಸಹಾಯಕ ಚುನಾವಣಾ ಅಧಿಕಾರಿಗಳಿಂದ ಅನುಮತಿ ಪಡೆಯಬೇಕು. ಈ ಟೆಂಟ್ ನಲ್ಲಿ ಕೇವಲ ಇಬ್ಬರು ಕಾರ್ಯಕರ್ತರಿಗೆ ಸಾಕಾಗುವಷ್ಟು ಟಾರ್ಪಲಿನ್ ಅಥವಾ ಛತ್ರಿ ಮೇಲ್ಛಾವಣಿ ಹೊಂದಬಹುದಾಗಿದ್ದು, 2 ಕುರ್ಚಿ ಮತ್ತು ಮೇಜು ಹೊಂದಲು ಅವಕಾಶವಿರುತ್ತದೆ ಎಂದು ತಿಳಿಸಿದರು.

ರಾಜಕೀಯ ಅಭ್ಯರ್ಥಿಗಳು ಮತದಾನದ ಅಂತ್ಯದ 48 ಗಂಟೆ ಮುಂಚಿತವಾಗಿ ಯಾವುದೇ ರೀತಿಯ ಬಹಿರಂಗ ಪ್ರಚಾರಗಳನ್ನು ಕೈಗೊಳ್ಳಲು ಅನುಮತಿ ಇರುವುದಿಲ್ಲ. ಧ್ವನಿ ವರ್ಧಕಗಳ ಬಳಕೆ ಮಾಡಲು ಅವಕಾಶವಿಲ್ಲ ಆದರೆ ಮನೆಮನೆ ಭೇಟಿಗೆ ಅವಕಾಶವಿರುತ್ತದೆ.

ಪ್ರತಿ ಮತಗಟ್ಟೆಗೆ ಒಬ್ಬ ಪೋಲಿಂಗ್ ಏಜೆಂಟ್ ಅನ್ನು ಹಾಗೂ ಇಬ್ಬರು ರಿಲೀಫ್ ಏಜೆಂಟ್ ಅನ್ನು ನೇಮಕ ಮಾಡಲು ಅವಕಾಶವಿರುತ್ತದೆ. ಇವರುಗಳು ನಿರ್ದಿಷ್ಟ ಪಡಿಸಿದ ಸ್ಥಳದಲ್ಲಿ ಆಸೀನರಾಗಕ್ಕಷ್ಟೆ ಮತಗಟ್ಟೆಯಲ್ಲಿ ಜನಪ್ರತಿನಿಧಿ



ಕಾಯ್ದೆ ಕಲಂ 128 ರಲ್ಲಿ ನಿರ್ದಿಷ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–3 | 26–04–2024

ಮೈಸೂರು

ರಸಗೊಬ್ಬರ ವಿತರಣೆ ಕಾರ್ಯಕ್ಕೆ ಚಾಲನೆ

■ ಕಾಯಕಯೋಗಿ ಸುದ್ದಿ

ಪಿರಿಯಾಪಟ್ಟಣ: ಸಕಾಲದಲ್ಲಿ ರೈತರಿಗೆ ತಂಬಾಕು ಮಂಡಳಿಯಿಂದ ರಸಗೊಬ್ಬರ ಒದಗಿಸಲಾಗುತ್ತಿದ್ದು, ಇದನ್ನು ರೈತರು ಮಾರಾಟ ಮಾಡದೆ ತಂಬಾಕು ಕೃಷಿಗೆ ಬಳಸಿಕೊಳ್ಳುವಂತೆ ತಂಬಾಕು ಮಂಡಳಿ ಸದಸ್ಯ ಎಚ್. ಸಿ. ಬಸವರಾಜ್ ತಿಳಿಸಿದರು.

ಕಗ್ಗುಂಡಿ ತಂಬಾಕು ಹರಾಜು ಮಾರುಕಟ್ಟೆಯಲ್ಲಿ ರೈತರಿಗೆ ರಸಗೊಬ್ಬರ ವಿತರಣೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಳೆದ ಬಾರಿ 100 ಮಿಲಿಯನ್ ಕೆಜಿ ತಂಬಾಕು ಬೆಳೆಯಲು ಕೇಂದ್ರ ಸರ್ಕಾರದ ವಾಣಿಜ್ಯ ಇಲಾಖೆ ಅನುಮತಿ ನೀಡಿತ್ತು. ಬರದ ನಡುವೆಯೂ ನಮ್ಮ ರೈತರು 90 ಮಿಲಿಯನ್ ಕೆಜಿ ಗುಣಮಟ್ಟದ ತಂಬಾಕನ್ನು ಬೆಳೆದು ಉತ್ತಮ ಬೆಲೆಯನ್ನು ಪಡೆದುಕೊಂಡಿದ್ದಾರೆ. ಈ ಬಾರಿ ಸಹ 100 ಮಿಲಿಯನ್ ಕೆಜಿ ನಿಗದಿಪಡಿಸಲಾಗಿದ್ದು, ಉತ್ತಮ ಮಳೆಯಾದರೆ ಶೇ.10 ರಿಂದ 20 ರಷ್ಟು ಹೆಚ್ಚುವರಿ ತಂಬಾಕು ಉತ್ಪಾದನೆಯಾಗುವ ನಿರೀಕ್ಷೆ ಇದೆ ಎಂದರು.



ತಂಬಾಕು ಮಂಡಳಿ ಸದಸ್ಯ ಜಿ. ಸಿ. ವಿಕ್ರಂ ರಾಜ್ ಮಾತನಾಡಿ ಕಳೆದ ಬಾರಿಗಿಂತ ಈ ಬಾರಿ ? 5200 ರಷ್ಟು ಕಡಿಮೆ ಬೆಲೆಗೆ ರಸ ಗೊಬ್ಬರ ಮಾರಾಟ ಮಾಡಲಾಗುತ್ತಿದ್ದು, ಕಾಪ್ ಸಮಿತಿ ಸದಸ್ಯರ ಪರಿಶ್ರಮದಿಂದ ನಮಗೆ ಕಡಿಮೆ ಬೆಲೆಗೆ ರಸ ಗೊಬ್ಬರ ದೊರೆತಿದೆ ಎಂದರು. ಕಾಪ್ ಸಮಿತಿ ಸದಸ್ಯರಾದ ಪಟೇಲ್ ಶ್ರೀನಿವಾಸ್, ಚಿಕ್ಕೇಗೌಡ, ಹರಾಜು ಅಧೀಕ್ಷಕ ಪ್ರಭಾಕರ್ ಹಾಜರಿದ್ದರು.

ಮತಗಟ್ಟೆಗಳಿಗೆ ತೆರಳಿದ ಸಿಬ್ಬಂದಿಗಳು





■ ಕಾಯಕಯೋಗಿ ಸುದ್ದಿ

ಪಿರಿಯಾಪಟ್ಟಣ: ಪಟ್ಟಣದ ಪುಷ್ಪ ವಿದ್ಯಾ ಸಂಸ್ಥೆಯ ಆವರಣದಲ್ಲಿ ಗುರುವಾರ ಬೆಳಿಗ್ಗೆನಿಂದಲೆ ಹೊರ ತಾಲೂಕುಗಳಿಂದ ಚುನಾವಣೆಗೆ ನಿಯೋಜಿಸಿದ ಅಧಿಕಾರಿ ಮತ್ತು ಸಿಬ್ಬಂದಿ ಆಗಮಿಸಿ ಮಸ್ಟರಿಂಗ್ ನಡೆದ ಬಳಿಕ ತಮಗೆ ನಿಯೋಜಿಸಿದ ಸ್ಥಳಗಳಿಗೆ ಚುನಾವಣಾ ಪರಿಕರಗಳೊಂದಿಗೆ ತೆರಳಿದರು.

ತಾಲೂಕಿನ 235 ಮತಗಟ್ಟೆಗಳಲ್ಲಿ ಎ.26 ರ ಬೆಳಿಗ್ಗೆ 7 ಗಂಟೆಯಿಂದ ಸಂಜೆ 6ರ ತನಕ ಮತದಾನ ನಡೆಯಲಿದೆ. ಎಲ್ಲ ಮತಗಟ್ಟೆಗಳಲ್ಲಿ ವೆಬ್ ಕ್ಯಾಸ್ಟಿಂಗ್ ಮಾಡಿ ಮತಗಟ್ಟೆಗೆ ಪೋಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ಚುನಾವಣೆ ಕರ್ತವ್ಯಕ್ಕೆ ಪಿಆರ್ ಓ 235 ಮೀಸಲು 24, ಎಪಿಆರ್ಓ 235 ಮೀಸಲು 24, ಪಿಒ 518 ಮೀಸಲು 48 ನೇಮಕ ಮಾಡಲಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿ ಮೂಡ ಕಾರ್ಯದರ್ಶಿ ಜಿ.ಡಿ ಶೇಖರ್ ಮಾಹಿತಿ ನೀಡಿದ್ದಾರೆ.

ಮಸ್ಟರಿಂಗ್ ಸ್ಥಳದಲ್ಲಿ ಪಿರಿಯಾಪಟ್ಟಣ ಸಾರಿಗೆ ಘಟಕ ವ್ಯವಸ್ಥಾಪಕ ದರ್ಶನ್ ರಾಮಚಂದ್ ಹಾಜರಿದ್ದು ಸಿಬ್ಬಂದಿಗೆ ಸಲಹೆ ಸೂಚನೆ ನೀಡುತ್ತಿದ್ದರು, ಈ ವೇಳೆ ಮಾತನಾಡಿದ ಅವರು ನಮ್ಮ ಘಟಕದಿಂದ ಚುನಾವಣೆಗಾಗಿ 39 ಬಸ್ ನೀಡಿದ್ದು 18 ಬಸ್ ತಾಲೂಕಿನಿಂದ ಹೊರಗಡೆ ಹಾಗೂ 21 ಬಸ್ ಪಿರಿಯಾಪಟ್ಟಣಕ್ಕೆ ಮತ್ತು ಹೊರಗಡೆಯಿಂದ 16 ಬಸ್ ಆಗಮಿಸಿವೆ. ಚುನಾವಣಾ ದಿನದಂದು ನಿಗದಿತ ಮಾರ್ಗದ ಸಾರಿಗೆ ಸಂಚಾರದಲ್ಲಿ ವ್ಯತ್ಯಯವಾಗಲಿದ್ದು ಅತ್ಯಗತ್ಯವಾಗುಗುವಾಗಿ ಬಸ್ ಕಾರ್ಯಾಚರಣೆ ಮಾಡಲಿವೆ ಸಾರ್ವಜನಿಕರು ಸಹಕರಿಸುವಂತೆ ಕೋರಿದರು, ಸಾರಿಗೆ ವಾಹನ ಜತೆ ಮಿನಿ ಬಸ್ ಮತ್ತು ಜೀಪ್ ಅನ್ನು ಚುನಾವಣಾ ಕರ್ತವ್ಯಕ್ಕೆ ಬಳಸಲಾಗಿದೆ. ತಾಲೂಕಿನಿಂದ ಹೊರಗಡೆಗೆ ಚುನಾವಣೆ ಕರ್ತವ್ಯಕ್ಕೆ ನಿಯೋಜಿಸಿದ್ದ ಸಿಬ್ಬಂದಿಗು ಗುರುವಾರ ಮುಂಜಾನೆ ವಾಹನ ವ್ಯವಸ್ಥೆ ಕಲ್ಪಿಸಲಾಗಿತ್ತು.

ತಾಲೂಕಿನಾದ್ಯಂತ ಎಲ್ಲಾ ಮತಗಟ್ಟೆಗಳಲ್ಲಿ ವಿಧಾನಸಭಾ ಸಾರ್ವತ್ರಿಕ ಚುನಾವಣೆಯನ್ನು ಯಶಸ್ವಿಗೊಳಿಸಲು ಸಹಾಯಕ ಚುನಾವಣಾಧಿಕಾರಿ ಮತ್ತು ಸಿಬ್ಬಂದಿ ಸಮ್ಮುಖ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಹಶೀಲ್ದಾರ್ ಸುರೇಂದ್ರ ಮೂರ್ತಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷ ತಾಲೂಕು ಪಂಚಾಯತಿ ಕಾರ್ಯ ನಿರ್ವಾಹಕಾಧಿಕಾರಿ ಡಿ.ಬಿ ಸುನಿಲ್ ಕುಮಾರ್ ತಿಳಿಸಿದ್ದಾರೆ.

ಮಾಸ್ಟರಿಂಗ್ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಡಾ.ಕೆ.ವಿ ರಾಜೇಂದ್ರ ಭೇಟಿ



ನಂಜನಗೂಡು: ಚಾಮರಾಜನಗರ ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ನಂಜನಗೂಡು ಮತ್ತು ವರುಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಮತಗಟ್ಟೆಗಳಿಗೆ ಚುನಾವಣಾ ಸಿಬ್ಬಂದಿಗಳು ಗುರುವಾರ ಮಧ್ಯಾಹ್ನ ನಂಜನಗೂಡು ನಗರದ ಜೂನಿಯರ್ ಕಾಲೇಜು ಮತ್ತು ಜೆ.ಎ???ಸ್ ಕಾಲೇಜಿನ ಮೈದಾನದಲ್ಲಿ ಬೆಳಿಗ್ಗೆ ಚುನಾವಣೆ ಸಿಬ್ಬಂದಿಗೆ ಮಾರ್ಗದರ್ಶನದೊಂದಿಗೆ ಚುನಾವಣಾ ಸಲಕರಣೆಗಳನ್ನು ನೀಡಿ ಆಯಾ ಮತಗಟ್ಟೆಗಳಿಗೆ ಕಳಿಸಲಾಯಿತು. ನಂಜನಗೂಡು ವಿಧಾನಸಭಾ ಕ್ಷೇತ್ರದ 246 ಮತ್ತು ವರುಣ ವಿಧಾನಸಭೆ ಕ್ಷೇತ್ರದ 261 ಮತಗಟ್ಟೆಗಳಿಗೆ ಎಆರ್ಓ, ಎಪಿಆರ್ಓ ಮತ್ತು ಮೂವರು ಸಹಾಯಕ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ.

ವರುಣ ವಿಧಾನಸಭಾ ಕ್ಷೇತ್ರದಲ್ಲಿ 31 ಸೂಕ್ಷ್ಮ ಮತಗಟ್ಟೆಗಳಿವೆ ಹಾಗೂ ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ 43 ಸೂಕ್ಷ್ಮ ಮತಗಟ್ಟೆಗಳಿದ್ದು ಎಲ್ಲ ಮತಗಟ್ಟೆಗಳಿಗೆ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ.

ಜಿಲ್ಲಾಧಿಕಾರಿ ಡಾ. ಕೆ ವಿ ರಾಜೇಂದ್ರ ಭೇಟಿ ನೀಡಿ ಪರಿಶೀಲನೆ ನಡೆಸಿ, ಎಲ್ಲ ಮತಗಟ್ಟೆಗಳಲ್ಲಿ ಶಾಂತಿಯುತವಾಗಿ ಮತದಾನವನ್ನು ನಡೆಸಬೇಕು ಎಂದು ಚುನಾವಣಾ ಸಿಬ್ಬಂದಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ.

ಈ ಸಂದರ್ಭದಲ್ಲಿ ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು, ವರುಣ ವಿಧಾನಸಭಾ ಕ್ಷೇತ್ರದ ಚುನಾವಣಾ ಅಧಿಕಾರಿ ಕಲ್ಪ ಶ್ರೀ, ನಂಜನಗೂಡು ವಿಧಾನಸಭಾ ಕ್ಷೇತ್ರದ ಚುನಾವಣಾ ಅಧಿಕಾರಿ ಜಗನ್ನಾಥ ಮೂರ್ತಿ ಸೇರಿದಂತೆ ಹಲವರು ಭಾಗವಹಿಸಿದ್ದರು.

11ನೇ ಪಂಚೇನ್ ಲಾಮಾ ಹುಟ್ಟುಹಬ್ಬ ಆಚರಣೆ



■ ಕಾಯಕಯೋಗಿ ಸುದ್ದಿ

ಪಿರಿಯಾಪಟ್ಟಣ: ತಾಲೂಕಿನ ಬೈಲುಕುಪ್ಪೆ ಟಿಬೆಟಿಯನ್ನರ ಪರಂಪರೆ ಧಾರ್ಮಿಕ ಗುರು 11ನೇ ಪಂಚೇನ್ ಲಾಮಾರವರ 35ನೇ ವರ್ಷದ ಹುಟ್ಟುಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಣೆ ಮಾಡಲಾಯಿತು.

ಪಿರಿಯಾಪಟ್ಟಣ ತಾಲೂಕಿನ ಬೈಲ ಕುಪ್ಪೆಯ ತಶೀಲಂಪೋ ದೇವಸ್ಥಾನದಲ್ಲಿ ನೂರಾರು ಟಿಬೆಟಿಯನ್ನರು ಹಾಗೂ ಬೌದ್ಧ ಭಿಕ್ಷುಗಳು ಬೆಳಿಗ್ಗಿನಿಂದಲೇ ಹೊಸ ಉಡುಪುಗಳನ್ನು ತೊಟ್ಟು, ಟಿಬೆಟಿಯನ್ ಮಾದರಿಯ ಪೂಜೆಗಳನ್ನು ನೆರವೇರಿಸಿದರು, ಬಳಿಕ ಬೃಹತ್ ಗಾತ್ರದ ಕೇಕನ್ನು ಕಟ್ ಮಾಡಿ ಸಂತಸ ವ್ಯಕ್ತ ಪಡಿಸಿದರು. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ದೇಶದೆಲ್ಲೆಡೆ ಹುಟ್ಟುಹಬ್ಬವನ್ನು ಆಚರಿಸಲು ಟಿಬೆಟಿಯನ್ ಸರ್ಕಾರ ಆದೇಶ ಹೊರಡಿಸಿದೆ.

ಪಂಚೆನ್ ಲಮಾ ರವರನ್ನು ಅತಿ ಚಿಕ್ಕ ವಯಸ್ಸಿನಲ್ಲಿ ಚೀನಾ ದೇಶದವರು ಬಂದನೆ ಮಾಡಿ, ನಮಗಳಿಗೆ ಕಳೆದ 35 ವರ್ಷಗಳಿಂದ ದುಃಖದಲ್ಲೇ ಅವರ ಹುಟ್ಟುಹಬ್ಬವನ್ನು ಸಂಭ್ರಮಿಸುತ್ತಿರುವುದು ಸೂಚನೆಯ ಸಂಗತಿ ಎಂದು ದೇವಸ್ಥಾನದ ಚಿಂಬಲಾಮ ಗುರೂಜಿ ತಿಳಿಸಿದರು. ಅದಷ್ಟು ಬೇಗ ಅವರ ಬ್ಗೆ ಮಾಹಿತಿಯನ್ನು ನೀಡಬೇಕು ಎಂದು ನೂರಾರು ಟಿಬೆಟಿಯನ್ನರು ಇದೇ ಸಂದರ್ಭದಲ್ಲಿ ಆಗ್ರಹಿಸಿದರು.

ಕುವೆಂಪು ಸಂಚಾರಿ ಗ್ರಂಥಾಲಯದ ವಾಹನ ಸೇವೆ ಆರಂಭ

ಮೈಸೂರು: ನಗರ ಕೇಂದ್ರ ಗ್ರಂಥಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕುವೆಂಪು ಸಂಚಾರಿ ಗ್ರಂಥಾಲಯ ವಾಹನ ಸೇವೆಯನ್ನು ತಾಂತ್ರಿಕ ಕಾರಣಗಳಿಂದಾಗಿ ಏ.18 ರಿಂದ ಸ್ಥಗಿತಗೊಳಿಸಲಾಗಿತ್ತು. ಸದರಿ ಸಂಚಾರಿ ಗ್ರಂಥಾಲಯ ವಾಹನ ಸೇವೆಯನ್ನು ಏ.24 ರಿಂದ ಪುನರಾರಂಭಿಸಲಾಗಿದ್ದು, ಸಾರ್ವಜನಿಕ ಓದುಗರು ಸಂಚಾರಿ ಗ್ರಂಥಾಲಯದ ಸೇವೆಯನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏಡ್ಸ್ ಜಾಗೃತಿ ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ನಂಜನಗೂಡು: ದೇಶದ ಆಸ್ತಿಯಾಗಿರುವ ಯುವ ಜನತೆ ಹೆಚ್ಐವಿ/ಏಡ್ಸ್ ಕುರಿತಾಗಿ ಸೂಕ್ತ ಅರಿವನ್ನು ಹೊಂದುವ ಮೂಲಕ ಹೆಚ್ಐವಿ ತಡೆಗಟ್ಟುವಲ್ಲಿ ಎಚ್ಚರಿಕೆ ವಹಿಸಬೇಕು ಎಂದು ನಂಜನಗೂಡಿನ ಸಾರ್ವಜನಿಕ ಆಸ್ಪತ್ರೆಯ ಹಿರಿಯ ದಂತ ಆರೋಗ್ಯ ಅಧಿಕಾರಿ ಡಾ.ಅನಿತಾ ಸಲಹೆ ನೀಡಿದರು.

ನಂಜನಗೂಡು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2, ರೆಡ್ ಕ್ರಾಸ್ ಹಾಗೂ ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಸಹಯೋಗದಲ್ಲಿ ನಡೆದ ಏಡ್ಸ್ ಕುರಿತ ಜಾಗೃತಿ ಮತ್ತು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ವಿದ್ಯಾವಂತ ಯುವ ವಿದ್ಯಾರ್ಥಿಗಳು ಹೆಚ್ಐವಿ ಕುರಿತಾದ ಸೂಕ್ತ ತಿಳುವಳಿಕೆ ಪ್ರಜ್ಞಾವಂತರಾಗಬೇಕು. ಆ ಮೂಲಕ ಪಡೆದು ಸಮುದಾಯಕ್ಕೆ ತಲುಪಿಸುವ ಮೂಲಕ ಸಾಮಾಜಿಕ ಹೊಣೆಗಾರಿಕೆ ತೋರಬೇಕು. ಜನರಲ್ಲಿ ಹೆಚ್ಐವಿ ಕುರಿತಾಗಿ ತುಂಬಾ ಮೌಢ್ಯತೆ ಇದೆ .ಟ್ಟಿಗೆ ಕುಳಿತು ಊಟ ಮಾಡಾವ, ಮಲಗುವ, ಓಡಾಡುವ, ಕೈಕುಲುಕುವ ಮೊದಲಾದವುಗಳ ಮೂಲಕವೂ ಹೆಚ್.ಐ.ವಿ ಹರಡುತ್ತದೆ ಎಂಬ ನಂಬಿಕೆಗಳಿವೆ .ಅವರಿಗೆ ಈ ಕುರಿತ ಸೂಕ್ತ ತಿಳುವಳಿಕೆಯನ್ನು ಯುವ ಸಮುದಾಯ ಒದಗಿಸಬೇಕು.

ಹೆಚ್.ಐ.ವಿ. ಸೋಂಕಿತರಿಗೆ ಆಪ್ತ ಸಮಾಲೋಚನೆಯ ಮೂಲಕ ಆತ್ಮವಿಶ್ವಾಸ ಮೂಡಿಸುವ ಕೆಲಸ ಮಾಡಬೇಕು. ಹೆಚ್ಐವಿಗೆ ಯಾವುದೇ ಲಸಿಕೆಗಳಲ್ಲ ಆದರೆ ಆರಂಭದ ಹಂತದಲ್ಲಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳುವ ಮೂಲಕ ವ್ಯಕ್ತಿಯ ಜೀವಿತಾವಧಿಯನ್ನು ಹೆಚ್ಚಿಸಿ ಜೀವನಮಟ್ಟವನ್ನು ಸುಧಾರಿಸಬಹುದು.

ಈ ನಿಟ್ಟಿನಲ್ಲಿ ಹೆಚ್ಐವಿ ಸೋಂಕಿತರ ಪ್ರಮಾಣವನ್ನು ಶೂನ್ಯವಾಗಿಸುವಲ್ಲಿ ನ್ಯಾಕೋ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇತ್ಯಾದಿ ಸಂಸ್ಥೆಗಳು ಅವಿರತವಾಗಿ ಪ್ರಯತ್ನ ಮಾಡುತ್ತಿವೆ ಎಂದರು.

ನಂಜನಗೂಡಿನ ಸಾರ್ವಜನಿಕ ಆಸ್ಪತ್ರೆಯ ಐಟಿಸಿ ಆಪ್ತ ಸಮಾಲೋಚಕರಾದ ರಾಜೇಶ್ ಮಾತನಾಡಿ, ಭಾರತದಲ್ಲಿ ಆಂಧ್ರಪ್ರದೇಶ, ಮಹಾರಾಷ್ಟ್ರ,ತಮಿಳುನಾಡು, ರಾಜಸ್ಥಾನ, ಕರ್ನಾಟಕ ರಾಜ್ಯಗಳಲ್ಲಿ ಹೆಚ್ಚು ಹೆಚ್ಐವಿ ಪ್ರಕರಣಗಳು ದಾಖಲಾಗಿವೆ. ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನಲ್ಲೇ ಸರಿಸುಮಾರು 2,100 ಹೆಚ್ಐವಿ ಪ್ರಕರಣಗಳಿವೆ. ಇದರಲ್ಲಿ ಶೇಕಡ 40 ರಿಂದ 50ರಷ್ಟು ಯುವಕರಿರುವುದು ಆತಂಕಕಾರಿ ಸಂಗತಿ. ಆದ್ದರಿಂದ ವಿದ್ಯಾರ್ಥಿ ಯುವ ಜನತೆ ಸೂಕ್ತ ತಿಳುವಳಿಕೆ ಹೊಂದಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ

ಡಾ. ಬಸವನಗೌಡ ಅವರು, ವಿದ್ಯಾರ್ಥಿಗಳು ತಮ್ಮನ್ನು ತಾವು ಆಸ್ತಿ ಎಂದು ಪರಿಗಣಿಸಬೇಕು.ಉತ್ತಮ ಆರೋಗ್ಯವನ್ನು ಹೊಂದುವ ಮೂಲಕ ಸದೃಢರಾಗಬೇಕು ಜೊತೆಗೆ ಲೈಂಗಿಕ ಶಿಕ್ಷಣ, ಶಿಕ್ಷಣದ ಭಾಗವಾಗಬೇಕು ಎಂದರು.

ಚಾಮರಾಜನಗರದ ಬಸವರಾಜೇಂದ್ರ ರಕ್ತನಿಧಿ ಕೇಂದ್ರದ ಸಹಯೋಗದಲ್ಲಿ ನಡೆದ ರಕ್ತದಾನ ಶಿಬಿರದಲ್ಲಿ ವಿದ್ಯಾರ್ಥಿಗಳು ರಕ್ತದಾನ ಮಾಡಿದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ರೇಣುಕಾಬಾಯಿ, ರಾ.ಸೇ.ಯೋ. ಕಾರ್ಯಕ್ರಮಾಧಿಕಾರಿಗಳಾದ ಡಾ. ಮಹದೇವ ಪ್ರಸಾದ್ ಎನ್. ಎಸ್.,ಡಾ.ಉಷಾ ಡಿ.ಕೆ, ರೆಡ್ ಕ್ರಾಸ್ ಸಂಚಾಲಕರಾದ ಶ್ರೀ ಶ್ರೀಧರ್ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ರಕ್ತದಾನ ಮಾಡಿದ ವಿದ್ಯಾರ್ಥಿಗಳು



ಗುಡುಗು –ಸಿಡಿಲಿನಿಂದಾಗುವ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಸಲಹೆ ಸೂಚನೆ

■ ಕಾಯಕಯೋಗಿ ಸುದ್ದಿ

ಮಂಡ್ಯ: ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು – ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುವುದರಿಂದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಗುಡುಗು ಮತ್ತು ಸಿಡಿಲು ಬಡಿತದಿಂದ ಉಂಟಾಗುವ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಸಲಹೆ ಸೂಚನೆಗಳನ್ನು ನೀಡಲಾಗಿದೆ.

ಈ ಹಿನ್ನೆಲೆ ಜಿಲ್ಲೆಯಲ್ಲಿ ಸ್ಥಳೀಯ ಜನರನ್ನು ಎಚ್ಚರಿಸಲು ಹಾಗೂ ಗುಡುಗು ಮತ್ತು ಸಿಡಿಲಿನ ಅಪಾಯಗಳನ್ನು ತಗ್ಗಿಸಿ ಜೀವಹಾನಿಯನ್ನು ತಪ್ಪಿಸಲು ಸಲಹೆ ಸೂಚನೆಗಳನ್ನು ನೀಡಲಾಗಿದೆ.

ಸಾರ್ವಜನಿಕರು ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಹಾಗೂ Common Alerting Protocol (CAP ವಿಕೋಪ ಉಸ್ತುವಾರಿ ಕೇಂದ್ರದಿಂದ ಬರುವ Alerts / ಸಂದೇಶಗಳನ್ನು ಗಮನಿಸುವುದು.

ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನು ಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು ಉತ್ತಮ.

ಗುಡುಗು–ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ. ಸುರಕ್ಷಿತವಾದ ಕಟ್ಟಡಗಳಾದ ಮನೆಗಳು, ಕಛೇರಿಗಳು, ಅಂಗಡಿಗಳು ಮತ್ತು ಕಿಟಕಿ ಮುಚ್ಚಿರುವಂತಹ ವಾಹನಗಳಲ್ಲಿ ಆಶ್ರಯ ಪಡೆಯುವುದು.

ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಬಿರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿಕೊಂಡು ಆಶ್ರಯ ಪಡೆಯುವುದು.

ಕೆರೆ, ನದಿಗಳು ಹಾಗೂ ಇನ್ನಿತರೆ ನೀರಿನ ಮೂಲಗಳಿಂದ ತಕ್ಷಣವೇ ದೂರವಿರುವುದು. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು, ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರುವುದು.

ಗುಡುಗು – ಸಿಡಿಲಿನ ಮುನ್ಸೂಚನೆ ಅಥವಾ ಮುನ್ಸೆಚ್ಚರಿಕೆ ಇದ್ದಲ್ಲಿ ಪ್ರಯಾಣವನ್ನು ಮುಂದೂಡುವುದು ಹಾಗೂ ಮನೆಗಳಲ್ಲೆ ಇರುವುದು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯುವುದು ಹಾಗೂ ವಾಹನ ಕಿಟಕಿಗಳನ್ನು ಮುಚ್ಚಿ ವಾಹನದ ಒಳಗೆ ಇರುವುದು ಹಾಗೂ ಮರಗಳು ಮತ್ತು ವಿದ್ಯುತ್ ಲೈನ್‌ಗಳಿಂದ ದೂರ ವಾಹನ ನಿಲುಗಡೆ ಮಾಡುವುದು.

ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುತ್ತಿದ್ದರೆ ಮತ್ತು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸಾಕಷ್ಟು ಸಮಯವಿಲ್ಲದಿದ್ದರೆ ಎರಡು ಕಾಲುಗಳನ್ನು ಜೋಡಿಸಿ ಮಂಡಿಯೂರಿ ಕುಳಿತುಕೊಂಡು ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳುವುದು. ಗುಂಪಿನಲ್ಲಿದ್ದರೆ ಅಪಾಯವನ್ನು ಕಡಿಮೆ ಮಾಡಲು ಸಾಕಷ್ಟು ಅಂತರವನ್ನು ಕಾಯ್ದುಕೊಳ್ಳುವುದು.

ಮಿಂಚಿನ್ನು ಆಕರ್ಷಿಸುವಂತಹ ವಿದ್ಯುತ್, ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಕಬ್ಬಿಣದ ಸರಳುಗಳಿಂದ ಕೂಡಿದ ಛತ್ರಿಗಳನ್ನು ಬಳಸಬಾರದು.

ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್ ಗಳನ್ನು ಬಳಸಬಾರದು ಹಾಗೂ ವಿದ್ಯುತ್ ಸಂಪರ್

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-4
26-04-2024
ತುಮಕೂರು-ಚಾಮರಾಜನಗರ

ಕಾಲ್ಪನಿಕ ಸಾಹಿತ್ಯಕ್ಕಿಂತ ಅನುಭವ ಜನ್ಯ ಸಾಹಿತ್ಯವು ಮೌಲಿಕವಾದದ್ದು

ಮಂಡ್ಯ ಸಾಹಿತ್ಯವು ನಮ್ಮೊಳಗನ್ನು ಅರಿಯುವುದರ ಜೊತೆಗೆ ನಮ್ಮ ಮತ್ತು ಲೋಕದ ಸಂಬಂಧವನ್ನು ಅರ್ಥೈಸಿಕೊಳ್ಳಲು ಸಹಾಯಕ. ಕಾಲ್ಪನಿಕ ಸಾಹಿತ್ಯಕ್ಕಿಂತ ಅನುಭವ ಜನ್ಯ ಸಾಹಿತ್ಯವು ಮೌಲಿಕವಾದದ್ದು ಎಂದು ಕವಿ ಕೊತ್ತತ್ತಿ ರಾಜು ಹೇಳಿದರು.

ನಗರದ ಕ್ಸಿಕಾ ಶಿಲ್ಪ ನವೋದಯ ಎಜುಕೇಷನ್ ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಮಹಾವೀರ ಜಯಂತಿ ಹಾಗೂ ಲೇಖಕಿ ಡಾ. ಕನ್ನಿಕಾ ಅವರ ಆಧುನಿಕ ಮಚಿಗಳಗ ಸಂಕಲನ ಕೃತಿ 'ಕ್ಸಿಕಾ ಶಿಲ್ಪ' ಬಿಡುಗಡೆ ಸಮಾರಂಭದಲ್ಲಿ ಕೃತಿ ಕುರಿತು ಮಾತನಾಡಿದರು.

ಪ್ರಸ್ತುತ 'ಕನ್ನಿಕಾ ಶಿಲ್ಪ' ಕೃತಿಯು ಡಾ. ಕನ್ನಿಕಾ ಅವರ ಚೊಪದಿಗಳ ಸಂಕಲನವಾಗಿದ್ದು, ಇದರಲ್ಲಿ ಕವಯಿತ್ರಿ ತಮ್ಮ ಅನುಭವವನ್ನು ಚೊಪದಿಯನ್ನಾಗಿಸಿದ್ದಾರೆ. ಚೊಪದಿಗಳು ಸರಳವಾಗಿದ್ದರೂ ಅರ್ಥ ಸಂರ್ಣತೆಯಿಂದ ಪ್ರಭಾವಶಾಲಿಯಾಗಿವೆ. ಡಾ. ಕನ್ನಿಕ ಅವರು ಶಿಕ್ಷಣದ ಜೊತೆಗೆ ಸಂಘಟನೆ, ಸಾಹಿತ್ಯ ಮತ್ತು ಸಮಾಜ ಸೇವೆ ಹೀಗೆ ಹಲವು ಕ್ಷೇತ್ರಗಳಲ್ಲಿ ತಮ್ಮನ್ನು ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ಪ್ರತಿಭೆ ಎಂದು ತಿಳಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಹಿರಿಯ ಪತ್ರಕರ್ತ, ಹೋರಾಟಗಾರ ನಾಗಣ್ಣಗೌಡ ಅವರು ಸಾಹಿತ್ಯವು ಮನುಷ್ಯನನ್ನು ಶಕ್ತಿಕಾಲಿಯನ್ನಾಗಿಸುತ್ತದೆ. ಪ್ರಸ್ತುತ ದಿನಗಳಲ್ಲಿ ಕೃತಿಗಳನ್ನು ಕುರಿತು ಸಂವಾದಗಳು ನಡೆಯಬೇಕೆದೆ ಎಂದು ಸಲಹೆ ನೀಡಿದರು. ಕೃತಿಯನ್ನು ಬಿಡುಗಡೆ ಮಾಡಿದ ಸಾಹಿತಿಗಳಾದ ಡಾ. ಶುಭ್ರೀಪ್ರಸಾದ್ ಅಮಯ ಡಾ.ಬಿ.ಆರ್.ಅಂಬೇಡ್ಕರ್, ಮಹಾವೀರ ಮುಂತಾದ ಮಹಾನೀಯರು ತಮ್ಮ ಸಾಧನೆಗಳಿಂದ ಅಮರರಾಗಿದ್ದಾರೆ. ಇಂತಹ ಸಾಧಕರು ನಮಗೆ ಮತ್ತು ಮಕ್ಕಳಿಗೆ ಪ್ರೇರಣೆಯಾಗಿದ್ದಾರೆ. ಜೀವನಚರಿತ್ರೆಗಳ ಓದು ಮಕ್ಕಳಿಗೆ ಸ್ಫೂರ್ತಿದಾಯಕ ಎಂದು ಅಭಿಪ್ರಾಯಪಟ್ಟರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ಕೃಷ್ಣೇಗೌಡ ಹುಸ್ಕೂರು ಅವರು ಹಿರಿಯರಲ್ಲಿ ಮತ್ತು ಮಕ್ಕಳಲ್ಲಿ ಸಂಸ್ಕೃತಿಯ ಪ್ರಭಾವ ಕಡಿಮೆಯಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.


ಸಂಸ್ಕೃತಿ ಮತ್ತು ಸಂಸ್ಕಾರವನ್ನು ಕಲಿಸುವುದು ಶಿಕ್ಷಣದ ಮುಖ್ಯ ಗುರಿಯಾಗಬೇಕು ಎಂದು ತಿಳಿಸುತ್ತಾ, ಡಾ. ಕನ್ನಿಕ ಅವರ ಕನ್ನಿಕಾ ಶಿಲ್ಪ ಕೃತಿಯು ದಾರಿದೀಪದಂತಿದೆ ಎಂದು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

ಆಕರ್ಷಣೆ ಹೆಚ್ಚಿಸಿದ ವೈವಿಧ್ಯಮಯ ವಿಶೇಷ ಮತಗಟ್ಟೆಗಳು

ಜಿಲ್ಲಾಧಿಕಾರಿಗಳಿಂದ ವಿಶೇಷ ಮತಗಟ್ಟೆಗಳಿಗೆ ಭೇಟಿ, ವೀಕ್ಷಣೆ, ಮೆಚ್ಚುಗೆ

■ ಕಾಯಕಯೋಗಿ ಸುದ್ದಿ





ಚಾಮರಾಜನಗರ: ಮತದಾರರನ್ನು ಮತಗಟ್ಟೆಗಳ ಕಡೆಗೆ ಸೆಳೆಯಲು ಜಿಲ್ಲಾ ಸ್ವೀಪ್ ಸಮಿತಿಯು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಸ್ಥಾಪಿಸಲಾಗಿರುವ ವಿಶೇಷ ಮತಗಟ್ಟೆಗಳು ವೈವಿಧ್ಯಮಯ ಆಕರ್ಷಣೆಯನ್ನು ಹೆಚ್ಚಿಸಿಕೊಂಡಿದ್ದು, ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ವಿಶೇಷ ಮತಗಟ್ಟೆಗಳಿಗೆ ಭೇಟಿ ನೀಡಿ, ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಅವರುಗಳು ವಿಶೇಷ ಮತಗಟ್ಟೆ ವೀಕ್ಷಣೆ ಸಮಯದಲ್ಲಿ ಜಿಲ್ಲಾಧಿಕಾರಿಗಳಿಗೆ ಸಾಥ್ ನೀಡಿದರು.

ನಗರದ ರಾಮಸಮುದ್ರ ಬಡಾವಣೆಯ ಬಾಲರಭವನ್ ಶಾಲೆಯ ಎದುರು ಇರುವ ಸರ್ಕಾರಿ ಶಾಲೆಯ ಮತಗಟ್ಟೆಯಲ್ಲಿ ಸ್ಥಾಪಿಸಲಾಗಿರುವ ಸಾಂಪ್ರಾದಾಯಿಕ ಮತಗಟ್ಟೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರ ತಂಡಕ್ಕೆ ಆದ್ಧೂರಿ ಸ್ವಾಗತ ದೊರೆಯಿತು. ಮತಗಟ್ಟೆಯನ್ನು ತಳಿರು, ತೋರಣಗಳು ಹಾಗೂ ರಂಗೋಲಿ ಚಿತ್ತಾರದಿಂದ ಸಿಂಗರಿಸಲಾಗಿತ್ತು. ಜಾನಪದ ಕಲಾವಿದರು ಸಿದ್ಧಪ್ಪಾಜಿ, ಮಂಟೇಸ್ವಾಮಿ ಪದಗಳನ್ನು ಹಾಡುವ ಮೂಲಕ ಗಣ್ಯರನ್ನು ಸ್ವಾಗತಿಸಿದರು.

ಸಾಂಪ್ರಾದಾಯಿಕ ಮತಗಟ್ಟೆಯಲ್ಲಿ ಕಲಾವಿದರು ಬಳಸುವ ಡೊಳ್ಳು, ತಮಟೆ, ನಗಾರಿ ವಾಲಗ, ಹಾರ್ಮೋನಿಯಂ, ಇತರೆ ವಾದ್ಯ ಪರಿಕರಗಳನ್ನು ಇಡಲಾಗಿತ್ತು. ಸಾಂಪ್ರಾದಾಯಿಕವಾಗಿ ಹಿಂದಿನ ಕಾಲದಲ್ಲಿ ಬಳಸಲಾಗುತ್ತಿದ್ದ ಶಾಏಗೆ ಒತ್ತುವ ಮರದ ಯಂತ್ರ, ರಾಗಿ ಬೀಸುವ ಕಲ್ಲು, ಕುಟ್ಟಣಿಗೆ, ಬಿದಿರಿನ ಕುಕ್ಕೆ, ಮೊರ, ಒಳ್ಳಕ್ಕಲ್ಲು, ಧಾನ್ಯಗಳನ್ನು ಅಳತೆ ಮಾಡುವ ಸೇರು, ಪಾವು, ಚಿಟಾಕಿ, ಬಿಂದ್ರಿ, ಆಡುಗೆ ಮಾಡುವ ವಿವಿಧ ಗಾತ್ರದ ಮಡಕೆಗಳು, ಹಸೆಮಣೆ ಸೇರಿದಂತೆ ಇನ್ನಿತರೆ ಪರಿಕರಗಳನ್ನು ವೀಕ್ಷಿಸಿದ ಜಿಲ್ಲಾಧಿಕಾರಿಯವರು ಮತಗಟ್ಟೆ ಸ್ಥಾಪನೆಗೆ ಮೆಚ್ಚುಗೆ ಸೂಚಿಸಿದರು.

ಬಳಿಕ ಹರದನಹಳ್ಳಿಯ ಶಾಲೆಯಲ್ಲಿ ತೆರೆಯಲಾಗಿರುವ ಯುವಸೌರಭ ಮತಗಟ್ಟೆಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿದರು. ಅಲ್ಲಿಯೂ ಸಹ ಮತಗಟ್ಟೆಯನ್ನು ರಂಗೋಲಿ, ತಳಿರು, ತೋರಣ ಹಾಗೂ ವಿವಿಧ ಬಗೆಯ ಹೂ ಗಳಿಂದ ಸಿಂಗರಿಸಲಾಗಿತ್ತು. ಮತಗಟ್ಟೆಯ ವ್ಯವಸ್ಥೆಗಳನ್ನು ಸಂಪೂರ್ಣವಾಗಿ ವೀಕ್ಷಿಸಿದ ಜಿಲ್ಲಾಧಿಕಾರಿಗಳು ಅಲ್ಲಿನ ಸಿದ್ಧತೆಗಳನ್ನು ಪರೀಶೀಲಿಸಿದರು. ಬಳಿಕ ಅಲ್ಲಿಯೇ ಇದ್ದ ಯುವ ಮತದಾರರನ್ನು ಕುಶಲೋಪರಿ ವಿಚಾರಿಸಿ ಮಾತನಾಡಿಸಿದರು. ಮೊದಲ ಬಾರಿ ಮತದಾನ ಮಾಡುತ್ತಿರುವ ಏಂದಿಬ್ಬರು ಯುವ ಮತದಾರರನ್ನು ಕಡ್ಡಾಯವಾಗಿ ಮತದಾನ ಹಾಗೂ ನೈತಿಕ ಮತದಾನ ಬೆಂಬಲಿಸುವಂತೆ ಪ್ರೇರೇಪಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ 22-ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಈ ಬಾರಿ ಮತದಾನದ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ಜಿಲ್ಲಾ ಸ್ವೀಪ್ ಸಮಿತಿಯು ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಿದ್ದು, ಈ ಮತಗಟ್ಟೆಗಳಲ್ಲಿ ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಿ ಮತದಾರರನ್ನು ಆಕರ್ಷಿಸುವ ಹಾದಿಯಲ್ಲಿ ಮುನ್ನೆಡೆದಿದೆ. ಈ ಮತದಾನ ಜಾಗೃತಿ ಕಾರ್ಯಕ್ರಮಗಳಿಗೆ ಜಿಲ್ಲಾಡಳಿತವು ಸಹ ಅಗತ್ಯ ಸಹಕಾರ ನೀಡಿದೆ.

ಜಿಲ್ಲೆಯಲ್ಲಿ 18 ವರ್ಷ ತುಂಬಿದ ನೂತನ ಯುವ ಮತದಾರರಲ್ಲಿ ಮತದಾನದ ಜಾಗೃತಿ ಮೂಡಿಸಲು ಯುವಸೌರಭ ಮತಗಟ್ಟೆಗಳು, ಮಂಹಿಳೆಯರನ್ನು ಮತದಾನಕ್ಕಾಗಿ ಪ್ರೇರೇಪಿಸಲು ಸಖಿಸೌರಭ ಮತಗಟ್ಟೆಗಳು, ದೇಶದ ಬೆನ್ನೆಲುಬಾದ ರೈತರನ್ನು ಮತಗಟ್ಟೆಗೆ ಸೆಳೆಯಲು ಅನ್ನದಾತರ ಮತಗಟ್ಟೆಗಳು, ಜಾನಪದ ಹಾಗೂ ಸಾಂಸ್ಕೃತಿಕ ಕಲೆಗಳ ಮಹತ್ವ ಸಾರುವ ಸಾಂಪ್ರಾದಾಯಿಕ ಮತಗಟ್ಟೆಗಳು, ಜಿಲ್ಲೆಯಲ್ಲಿ ಶೇ. 54ರಷ್ಟು ಅರಣ್ಯ ಪ್ರದೇಶವಿದ್ದು, ಅರಣ್ಯದ ಕುರಿತು ಅರಿವು ಮೂಡಿಸುವ ಹಸಿರು ಮತಗಟ್ಟೆಗಳು, ಬುಡಕಟ್ಟು ಜನರಿಗೆ ಮತದಾನದ ಪ್ರಾಮುಖ್ಯತೆ ತಿಳಿಸಲು ಬುಡಕಟ್ಟು ಮತಗಟ್ಟೆಗಳು, ವಿಶೇಷಚೇತನರನ್ನು ಆಗತ್ಯ ಸೌಲಭ್ಯ ಕಲ್ಪಿಸಿ ಮುಖ್ಯವಾಹಿನಿಗೆ ತರುವ ಸಲುವಾಗಿ ವಿಶೇಷಚೇತನರ ಮತಗಟ್ಟೆಗಳನ್ನು ಜಿಲ್ಲೆಯ ಹಲವು ಗ್ರಾಮ ಪಂಚಾಯಿತಿಗಳಲ್ಲಿ ಸ್ಥಾಪಿಸಲಾಗಿದೆ.

ಜಿಲ್ಲಾಧಿಕಾರಿಯವರ ವಿಶೇಷ ಮತಗಟ್ಟೆ ವೀಕ್ಷಣೆ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ನಗರಸಭೆ ಪೌರಾಯುಕ್ತರಾದ ಎಸ್.ಏ. ರಾಮದಾಸ್, ಹಿರಿಯ ಆರೋಗ್ಯ ನಿರೀಕ್ಷಕರಾದ ಮಂಜುನಾಥ್, ಪರಿಸರ ಅಧಿಯಂತರರಾದ ಗಿರಿಜಮ್ಮ, ಇತರರು ಇದ್ದರು.

ಬೇಸಿಗೆ ಹಿನ್ನೆಲೆ: ಮತದಾನದಂದು ಅಗತ್ಯ ಮುಂಜಾಗ್ರತಾ ಕ್ರಮ ವಹಿಸುವಂತೆ ಆರೋಗ್ಯ ಇಲಾಖೆ ಸೂಚನೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:- ಲೋಕಸಭಾ ಸಾರ್ವತ್ರಿಕ ಚುನವಣೆ-2024 ರ ಸಂಬಂಧ ಏಪ್ರಿಲ್ 26 ರಂದು ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದ್ದು, ಬೇಸಿಗೆ ಸಂದರ್ಭದಲ್ಲಿ ಬಿಸಿಲಿನ ತಾಪದಿಂದ ಅತಿಯಾದ ಶಾಖ ಹಾಗೂ ಶಾಖ ತರಂಗದಿಂದ ಹೀಟ್ ಸ್ಟ್ರೋಕ್ ನಂತಹ ಆರೋಗದ್ಯ ಸಮಸ್ಯೆ ಉಂಟಾಗದಂತೆ ತಡೆಯಲು ಸಾರ್ವಜನಿಕರು ಅಗತ್ಯ ಮುಂಜಾಗ್ರತಾ ಕ್ರಮ ವಹಿಸುವಂತೆ ಆರೋಗ್ಯ ಇಲಾಖೆ ತಿಳಿಸಿದೆ.

ಮತದಾನ ಮಾಡಲು ಬರುವ ಸಾರ್ವಜನಿಕರು ಬಿಸಿಲಿನಿಂದ ರಕ್ಷಣೆ ಪಡೆಯಲು ಟೋಪಿ, ಕೊಡೆ ಸಹಾಯ ಪಡೆಯಬೇಕು. ಹೆಚ್ಚಾಗಿ ದ್ರವ ರೂಪದ ಆಹಾರ, ಹಣ್ಣುಗಳನ್ನು ಸೇವಿಸಬೇಕು. ಹೆಚ್ಚಾಗಿ ನೀರು ಕುಡಿಯಬೇಕು ಹಾಗೂ ಮತಗಟ್ಟೆ ಬಳಿ ನಿತ್ರಾಣ ಆದಲ್ಲಿ ಮತಗಟ್ಟೆಗೆ ನಿಯೋಜಿಸಿರುವ ವೈದ್ಯಕೀಯ ತಂಡದ ಬಳಿ ತಿಳಿಸಬೇಕು.

ಹೆಚ್ಚಿನ ಚಿಕಿತ್ಸೆ ಅವಶ್ಯಕವಿದ್ದಲ್ಲಿ ಆಂಬ್ಯುಲೆನ್ಸ್ ಮೂಲಕ ಆಸ್ಪತ್ರೆಗೆ ಕರೆದೊಯ್ಯಲು ಆರೋಗ್ಯ ಸಿಬ್ಬಂದಿಯ ಸಹಾಯ ಪಡೆಯಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಿದಂಬರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಡಿಯುವ ನೀರಿನ ಸಮಸ್ಯೆ: ಕಂಟ್ರೋಲ್ ರೂಂ ಸ್ಥಾಪನೆ

■ ಕಾಯಕಯೋಗಿ ಸುದ್ದಿ

ಮೈಸೂರು: ಪ್ರಸ್ತುತ ಬೇಸಿಗೆಕಾಲ ಇರುವುದರಿಂದ ತಮ್ಮ-ತಮ್ಮ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ತೊಂದರೆ ಉಂಟಾದ ಸಂದರ್ಭದಲ್ಲಿ ಸಾರ್ವಜನಿಕರು ಕಂಟ್ರೋಲ್ ರೂಂ ನಂ:08222-251029, ದೂ.ಸಂ:7996875651 ಅಥವಾ 9980016833 ನ್ನು ಸಂಪರ್ಕಿಸಿ ದೂರನ್ನು ಸಲ್ಲಿಸಬಹುದು ಎಂದು ಹುಣಸೂರು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾನಕ್ಕೆ ಕೌಂಟ್ ಡೌನ್- ಮತಗಟ್ಟೆಗಳತ್ತ ಇವಿಎಂ ಹಿಡಿದು ಹೊರಟ ಸಿಬ್ಬಂದಿ





■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಮತದಾನಕ್ಕೆ ಕೌಂಟ್ ಡೌನ್ ಆರಂಭಗೊಂಡಿದ್ದು ಮಸ್ಟರಿಂಗ್ ಕಾರ್ಯ ಮುಗಿಸಿ ಚುನಾವಣಾ ಸಿಬ್ಬಂದಿ ಮತಗಟ್ಟೆಗಳತ್ತ ತೆರಳಿದ್ದಾರೆ.

ಚಾಮರಾಜನಗರ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಸ್ಟರಿಂಗ್ ಕಾರ್ಯ ನಡೆದಿದ್ದು ಇವಿಎಂ ಹಿಡಿದು ನಿಗದಿಪಡಿಸಿದ ಮತಗಟ್ಟೆಗಳತ್ತ ಚುನಾವಣಾ ಸಿಬ್ಬಂದಿ ಬಸ್ ಲ್ಲಿ ತೆರಳಿದರು.

ಚಾಮರಾಜನಗರ ಜಿಲ್ಲೆಯಲ್ಲಿ 1196 PRO, 1196 APRO, 2392 PO ಸೇರಿದಂತೆ 4784 ಸಿಬ್ಬಂದಿಯು ಚುನಾವಣಾ ಕರ್ತವ್ಯ ನಿರ್ವಹಿಸಲಿದ್ದು, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ 2000 ಮತಗಟ್ಟೆ ಸ್ಥಾಪನೆ ಮಾಡಲಾಗಿದೆ.

2000 ಬ್ಯಾಲೆಟ್ ಯೂನಿಟ್ ಹಾಗೂ 559 ಕಾಯ್ದಿರಿಸಿಸುವದನ್ನು ಸೇರಿಸಿದರೆ ಒಟ್ಟು 2559 ಬ್ಯಾಲೆಟ್ ಯೂನಿಟ್ ಬಳಸಲಾಗುತ್ತಿದ್ದೆ. 2618 ಕಂಟ್ರೋಲ್ ಯೂನಿಟ್ , 2792 ವಿವಿ ಪ್ಯಾಟ್ ಗಳು ಬಳಸಲಾಗುತ್ತಿದೆ. ಜಿಲ್ಲೆಯ 197 ಮತಗಟ್ಟೆಗಳನ್ನು ಕ್ರಿಟಿಕಲ್ ಮತಗಟ್ಟೆಗಳು ಎಂದು ಗುರುತಿಸಲಾಗಿದೆ.

ಶಾಂತಿಯುತ ಮತದಾನ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ 4 ಡಿವೈಎಸ್ಪಿ, 13 ಪಿಐ, 41 ಪಿಎಸ್ಐ, 67 ಎಎಸ್ಐ, 936 ಕಾನ್ಸ್ಟೇಬಲ್, 600 ಹೋಂ ಗಾರ್ಡ್ ಸೇರಿದಂತೆ 1667 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಿ ಮಾಡಲಾಗಿದೆ.

ಇನ್ನು, ಮತಗಟ್ಟೆಗಳತ್ತ ಮತಗಟ್ಟೆ ಅಧಿಕಾರಿಗಳನ್ನು ಕರೆದೊಯ್ಯಲು 163 ಕೆಎಸ್ ಆರ್‌ಟಿಸಿ ಬಸ್ ಬಳಕೆ ಮಾಡಲಾಗುತ್ತಿದೆ. ಶುಕ್ರವಾರ ಬೆಳಿಗ್ಗೆ 7 ರಿಂದ ಲೋಕಸಭಾ ಕ್ಷೇತ್ರದಲ್ಲಿ ಮತದಾನ ಆರಂಭಗೊಳ್ಳಲಿದ್ದು ಮತದಾನ ಪ್ರಕ್ರಿಯೆಗೆ ಲೋಕ ಅಖಾಡ ಸಜ್ಜಾಗಿದೆ.

ಸಕಲ ವ್ಯವಸ್ಥೆ: ಚುನಾವಣಾ ಸಿಬ್ಬಂದಿಯಿಂದ ಮತದಾನ :

ಚುನಾವಣಾ ಸಿಬ್ಬಂದಿಗಳು ಮಸ್ಟರಿಂಗ್ ಕೇಂದ್ರದಲ್ಲಿ ಅಂಚೆ ಮತದಾನ ಮಾಡಿ ಮತಗಟ್ಟೆಗಳತ್ತ ತೆರಳಿದರೇ ಹಲವರು ಇಡಿಎಸ್ ಸರ್ಟಿಫಿಕೇಟ್ ಪಡೆದುಕೊಂಡು ಮತಗಟ್ಟೆಗಳತ್ತ ತೆರಳಿದರು. ಇಡಿಎಸ್ ಪಡೆದವರು ಮತಗಟ್ಟೆಗಳಲ್ಲೇ ತಮ್ಮ ಹಕ್ಕನ್ನು ಚಲಾಯಿಸಬಹುದಾಗಿದೆ.

ಚಾಮರಾಜನಗರ ಡಿಸಿ ಶಿಲ್ಪಾನಾಗ್, ಎಸ್ಪಿ ಪದ್ಮಿನಿ ಸಾಹು, ಜಿಪಂ ಸಿಇಒ ಆನಂದಪ್ರಕಾಶ್ ಮೀನಾ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಯಾವುದೇ ಗೊಂದಲಕ್ಕೆ ಒಳಗಾಗಬೇಡಿ. ಸಂದೇಹಗಳಿದ್ದರೇ ಕೇಳಿ ಪರಿಹರಿಸಿಕೊಳ್ಳಿ, ಧೈರ್ಯವಾಗಿ ಕರ್ತವ್ಯ ನಿರ್ವಹಿಸಿ, ಸಮಸ್ಯೆ-ಸಂದೇಹ ಏರ್ಪಟ್ಟರೇ ಸಹಾಯವಾಣಿಗೆ ಕರೆಮಾಡಿ ಎಂದು ಡಿಸಿ ಚುನಾವಣಾ ಸಿಬ್ಬಂದಿಗೆ ಧೈರ್ಯ ತುಂಬಿದರು.

ಲೋಕಸಭಾ ಚುನಾವಣೆ : 200ಕ್ಕೂ ಹೆಚ್ಚು ಮಾದರಿ ಮತಗಟ್ಟೆ





ತುಮಕೂರು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮತದಾರರನ್ನು ಸೆಳೆಯಲು ಹಾಗೂ ಮತದಾನ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ಜಿಲ್ಲೆಯಲ್ಲಿ 200ಕ್ಕೂ ಹೆಚ್ಚು ವಿಷಯಾಧಾರಿತ ಮಾದರಿ ಮತಗಟ್ಟೆಗಳನ್ನು ನಿರ್ಮಿಸಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಜಿ.ಪ್ರಭು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಆಯ್ದ ಮತಗಟ್ಟೆಗಳಲ್ಲಿ ಸಂಸ್ಕೃತಿ, ಪರಿಸರ, ಗ್ರಾಮೀಣ ಸೊಗಡು, ಐತಿಹಾಸಿಕ ಸ್ಥಳ ಸೇರಿದಂತೆ ವಿವಿಧ ವಿಷಯಾಧಾರಿತ ಮತಗಟ್ಟೆಗಳನ್ನು ನಿರ್ಮಿಸಲಾಗಿದೆ. ಭಾರತ ಚುನಾವಣಾ ಆಯೋಗದಿಂದ ಜಿಲ್ಲೆಗೆ 50 ಮತಗಟ್ಟೆಗಳನ್ನು ಮಾದರಿ ಮತಗಟ್ಟೆಗಳನ್ನಾಗಿ ನಿರ್ಮಿಸಲು ಗುರಿ ನೀಡಲಾಗಿತ್ತು. ಆದರೆ ಜಿಲ್ಲೆಯಲ್ಲಿರುವ ಒಟ್ಟು 2618 ಮತಗಟ್ಟೆಗಳ ಪೈಕಿ ಆಯ್ದ 200ಕ್ಕೂ ಹೆಚ್ಚು ಮತಗಟ್ಟೆಗಳನ್ನು ವಿವಿಧ ವಿಷಯಾಧಾರಿತ ಮತಗಟ್ಟೆಗಳನ್ನಾಗಿ ನಿರ್ಮಿಸಲಾಗಿದೆ.

ಮಹಿಳಾ ಮತದಾರರನ್ನು ಸೆಳೆಯಲು ಸಖಿ ಮತಗಟ್ಟೆ(ಪಿಂಕ್ ಬೂತ್), ಯುವ ಅಧಿಕಾರಿಗಳು ಯುವ ಮತಗಟ್ಟೆ, ವಿಶೇಷ ಚೇತನರು ನಿರ್ವಹಿಸುವ ವಿಶೇಷ ಚೇತನ ಮತಗಟ್ಟೆ ಸೇರಿದಂತೆ ಜಿಲ್ಲೆಯ ವಿವಿಧ ಕಲೆ, ಸಂಸ್ಕೃತಿ, ಐತಿಹಾಸಿಕ ಸ್ಥಳ, ಪ್ರಸಿದ್ಧಿ ಪಡೆದಿರುವ ಮತ್ತಿತರ ವಿಷಯಗಳ ಆಧಾರದ ಮೇಲೆ ಮಾದರಿ ಮತಗಟ್ಟೆಗಳನ್ನು ರೂಪಿಸಲಾಗಿದೆ.

ಆರೋಗ್ಯ ಮತ್ತು ಪೌಷ್ಟಿಕತೆ-ಮತದಾನವೇ ಪ್ರಜಾಪ್ರಭುತ್ವಕ್ಕೆ ಆರೋಗ್ಯ, ಮಿಲ್ಕಿ ವೇ(ಕ್ಷೀರ ಪಥ), ಜಲ ಸಂರಕ್ಷಣೆ, ಶಿಕ್ಷಣ ಸ್ನೇಹಿ, ಕ್ರೀಡೆ, ವೀರಗಾಸೆ ಸೇರಿದಂತೆ ವಿವಿಧ ಜಾನಪದ ಕಲೆಗಳುಳ್ಳ ಸಾಂಸ್ಕೃತಿಕ ಮತಗಟ್ಟೆ, ವಾಸ್ತು ಶಿಲ್ಪಕಲೆ, ಸಾಂಸ್ಕೃತಿಕ ಪರಂಪರೆ, ಮಹಿಳಾ ಮತ್ತು ಮಕ್ಕ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5 | 26-04-2024

ಹಾಸನ-ರಾಮನಗರ

ಕಾಂಗ್ರೆಸ್ ಪಕ್ಷ ಬೆಂಬಲಿಸುವಂತೆ ಸುದೇಶ್ ಮನವಿ

ಹನೂರು: ತಾಲೂಕು ಕೇಂದ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸಿರುವ ಕಾಂಗ್ರೆಸ್ ಪಕ್ಷಕ್ಕೆ ತಮ್ಮ ಅಮೂಲ್ಯವಾದ ಮತವನ್ನು ನೀಡಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಪಟ್ಟಣ ಪಂಚಾಯತಿ ಸದಸ್ಯ ಸುದೇಶ್ ಮನವಿ ಮಾಡಿದರು.

ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಎರಡನೇ ವಾರ್ಡಿನಲ್ಲಿ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ರವರ ಪರ ಹಮ್ಮಿಕೊಳ್ಳಲಾಗಿದ್ದ ಮನೆಮನೆ ಪ್ರಚಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹನೂರು ಪಟ್ಟಣವನ್ನು ತಾಲೂಕು ಕೇಂದ್ರವನ್ನಾಗಿ ಮಾಡಲು ಮಾಜಿ ಸಚಿವ ದಿ. ಜಿ ರಾಜಗೌಡ ರವರು ಹಾಗೂ ಮಾಜಿ ಶಾಸಕ ಆರ್ ನರೇಂದ್ರ ರವರ ಶ್ರಮದಿಂದ ಹನೂರು ಪಟ್ಟಣವನ್ನು ತಾಲೂಕು ಕೇಂದ್ರವನ್ನಾಗಿ ಮಾಡಲಾಗಿದೆ. ತಾಲೂಕು ಕೇಂದ್ರದಲ್ಲಿ ಉತ್ತಮ ಕ್ರೀಡಾಂಗಣ, ಖಾಸಗಿ ಬಸ್ ನಿಲ್ದಾಣ, ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಕೊಳ್ಳೇಗಾಲ ಪಟ್ಟಣದಿಂದ ಹನೂರು ಪಟ್ಟಣದವರೆಗೆ ಕೆಶಿಪ್ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿದ್ದಾರೆ. ಇದಲ್ಲದೆ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ವೆಂಕಾರ್ಜ ದೇಸಾಯಿ ವಿಕಲ್ಪ ವಶತಿ ಶಾಲೆ, ಪ್ರಥಮ



ದರ್ಜೆ ಕಾಲೇಜು, ಐಟಿಐ ಕಾಲೇಜು, ಜಿ .ವಿ ಗೌಡ ಕಾಲೇಜುಗಳನ್ನು ತೆರೆಯುವ ಮೂಲಕ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿದ್ದಾರೆ. ಒಟ್ಟಾರೆ ತಾಲೂಕು ಕೇಂದ್ರದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಮಾಜಿ ಶಾಸಕ ಆರ್ ನರೇಂದ್ರ ರವರ ಕೈ ಬಲಪಡಿಸಲು ಹಾಗೂ ದೇಶದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್ ರವರಿಗೆ ತಮ್ಮ ಮತ ಹಾಕಬೇಕು ಎಂದು ತಿಳಿಸಿದರು.

ಪಟ್ಟಣದ ವಿವಿಧಡೆ ಮನೆಮನೆ ಪ್ರಚಾರ: ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹನೂರು ಕೇಂದ್ರ ಸ್ಥಾನದ ಪಟ್ಟಣ ಪಂಚಾಯತಿಯ ವಿವಿಧ ವಾರ್ಡುಗಳಲ್ಲಿ ಪಟ್ಟಣ ಪಂಚಾಯಿತಿ ಸದಸ್ಯರುಗಳಾದ ಗಿರೀಶ್, ಹರೀಶ್, ಸಂಪತ್ ಕುಮಾರ್, ಮಾಜಿ ಉಪಾಧ್ಯಕ್ಷ ಬಸವರಾಜು, ಮುಖಂಡರಾದ ಪ್ರಸನ್ನ ಕುಮಾರ್ ಸೇರಿದಂತೆ ಪಕ್ಷದ ಕಾರ್ಯಕರ್ತರುಗಳು ಗ್ಯಾರೆಂಟಿ ಕಾರ್ಡ್ ಗಳನ್ನು ಮನೆ ಮನೆಗೆ ಹಂಚುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸುವಂತೆ ಮನವಿ ಮಾಡಿದರು. ಪ್ರಚಾರದ ವೇಳೆ ಪಟ್ಟಣ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಮಾದೇಶ್, ಮುಖಂಡರಾದ ರವಿ ಗೌಡ, ಯಜಮಾನ ಮಹಾದೇವ, ಸಿದ್ದನಂಜೇಗೌಡ ಮಾದೇವ, ಕಾಂತರಾಜು ,ರಮೇಶ್, ಮಹೇಶ್ ,ಸೇರಿದಂತೆ ಇನ್ನಿತರರು ಹಾಜರಿದ್ದರು.

ಗ್ಯಾರಂಟಿ ಕಾರ್ಡ್ ವಿತರಿಸುವ ಮೂಲಕ ನೀತಿ ಸಂಹಿತೆ ಉಲ್ಲಂಘನೆ

■ ಕಾಯಕಯೋಗಿ ಸುದ್ದಿ

ಕನಕಪುರ: ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಮತದಾರರಿಗೆ ಕಾಂಗ್ರೆಸ್ ಮುಖಂಡರು ಮತದಾನಕ್ಕೂ ಮುನ್ನ ಗ್ಯಾರಂಟಿ ಕಾರ್ಡ್ ಗಳನ್ನೂ ವಿತರಿಸುವ ಮೂಲಕ ಚುನಾವಣಾ ನೀತಿ ಸಂಹಿತೆಯ ಸ್ಪಷ್ಟ ಉಲ್ಲಂಘನೆ ಮಾಡಿರುವುದಾಗಿ ತಾಲೂಕು ಜೆಡಿಎಸ್ ಮುಖಂಡರು ಆರೋಪಿಸಿದ್ದಾರೆ.

ಗುರುವಾರ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಬಿ. ನಾಗರಾಜು ಅವರ ನಿವಾಸದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಮಾತನಾಡಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸಹ ರಾಮನಗರ, ಮಾಗಡಿ, ಕುಣಿಗಲ್,ಕ್ಷೇತ್ರಗಳಲ್ಲೂ ಸಹ ಮತದಾನಕ್ಕೂ ಮುನ್ನ ದಿನ ಮತದಾರರಿಗೆ ಗಿಫ್ಟ್ ಕಾರ್ಡ್ ಗಳನ್ನೂ ನೀಡಿ ವಂಚಿಸಿದ್ದಾರೆ, ಈ ಬಗ್ಗೆ



ರಾಜ್ಯ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಕೆಯಾಗಿದೆ. ಇಷ್ಟಾದರು ಸಹ ಕಾಂಗ್ರೆಸ್ಸಿಗರು ಈ ಲೋಕಸಭಾ ಚುನಾವಣೆಯಲ್ಲಿಯೂ ತಮ್ಮ ಚಾಳಿಯನ್ನು ಮುಂದುವರೆಸಿದ್ದು ಚುನಾವಣಾಧಿಕಾರಿಗಳು ಇವರ ವಿರುದ್ಧ ಕ್ರಮ ಜರುಗಿಸುವಂತೆ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ರಾಮನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್ ,ಆರ್ ನಾಗರಾಜ್,ಮುಖಂಡರುಗಳಾದ ಕೇಶವ್,ಶಿವಮಾದು, ಶೇಖರ್, ನಾಗರಾಜು, ಗುಂಡ, ವಿಜಿ , ಪತ್ರಿಕಾ ಗೋಷ್ಠಿಯಲ್ಲಿ ಹಾಜರಿದ್ದರು.

ಅಚ್ಚುಕಟ್ಟಾಗಿ ನಡೆದ ಮಸ್ಟರಿಂಗ್ ಕಾರ್ಯ

ಮತಗಟ್ಟೆಗಳತ್ತ ತೆರಳಿದ ಸಿಬ್ಬಂದಿ: ಇಂದಿನ ಮತದಾನಕ್ಕೆ ಸಕಲ ಸಜ್ಜು



ರಾಮನಗರ: ಲೋಕಸಭಾ ಚುನಾವಣೆಯ ಮತದಾನ ಏ. 26ರ ಶುಕ್ರವಾರ ಬೆಳಿಗ್ಗೆ 7 ರಿಂದ ಆರಂಭಗೊಳ್ಳಲಿದ್ದು, ಈ ಪ್ರಕ್ರಿಯೆಯಲ್ಲಿ ಮತಗಟ್ಟೆ ಸಿಬ್ಬಂದಿಗಳಿಗೆ ಮತ ಪೆಟ್ಟಿಗೆಗಳು ಹಾಗೂ ಚುನಾವಣಾ ಸಾಮಗ್ರಿಯನ್ನು ವಿತರಿಸುವ ಪ್ರಮುಖ ಘಟ್ಟವಾಗಿರುವ ಮಸ್ಟರಿಂಗ್ ಕಾರ್ಯ ಏ. 25ರ ಗುರುವಾರದಂದು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಚ್ಚುಕಟ್ಟಾಗಿ ನೆರವೇರಿದ್ದು, ಮತದಾನ ಕರ್ತವ್ಯಕ್ಕೆ ನಿಯೋಜಿತಗೊಂಡ ಅಧಿಕಾರಿ, ಸಿಬ್ಬಂದಿಗಳು ಮತಗಟ್ಟೆಗಳತ್ತ ತೆರಳಿದರು.

ವಿಶೇಷ ಮತಗಟ್ಟೆಗಳು



■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಮತದಾನಕ್ಕೆ ಕ್ಷಣ ಗಣನೆ ಆರಂಭಗೊಳ್ಳುತ್ತಿದ್ದಂತೆ ಚಾಮರಾಜನಗರ ಕ್ಷೇತ್ರದಲ್ಲಿ ವಿಶೇಷ ಮತಗಟ್ಟೆಗಳು ಮತದಾರರನ್ನು ಕೈ ಬೀಸಿ ಕರೆಯುತ್ತಿದೆ.

ಲಿಂಗ ಸಮಾನತೆ ಹಾಗೂ ಮತದಾನ ದಲ್ಲಿ ಮಹಿಳೆಯರ ಭಾಗವಹಿಸುವಿಕೆ ಉತ್ತೇಜಿಸಲು 'ಸಖಿ ಸೌರಭ ಶೀರ್ಷಿಕೆಯಡಿ ಮತಗಟ್ಟೆಗಳನ್ನು ವಿಶೇಷವಾಗಿ ಅಲಂಕರಿಸಿ ಮಹಿಳೆಯರನ್ನು ಮತದಾನಕ್ಕೆ ಪ್ರೇರೆಪಿಸಲಾಗಿದ್ದು ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 16 ಸಖಿ ಸೌರಭ ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗಿದೆ.



ಕೊಳ್ಳೇಗಾಲ ತಾಲೂಕಿನ ಸತ್ತೇಗಾಲ ಗ್ರಾಮದಲ್ಲಿ ಸಾಂಸ್ಕೃತಿಕ ಮತಗಟ್ಟೆ ಸ್ಥಾಪನೆ ಮಾಡಲಾಗಿದ್ದು ಮತಗಟ್ಟೆ ಮುಂಭಾಗ ಭರಚುಕ್ಕಿ ಜಲಪಾತದ ಪ್ರತಿಕೃತಿ ನಿರ್ಮಾಣ ಮಾಡಲಾಗಿದೆ.

ಸತ್ತೇಗಾಲ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿನ ಪ್ರೌಢಶಾಲೆಯ ಸ್ಥಳವಾದ ಭರಚುಕ್ಕಿ ಜಲಪಾತದ ಸೊಬಗನ್ನು ಬಹಳ ವಿಶಿಷ್ಟವಾಗಿ ಮತಗಟ್ಟೆಯಲ್ಲಿ ಸೃಷ್ಟಿಸಲಾಗಿದೆ. ಸಾಂಸ್ಕೃತಿಕ ಮತಗಟ್ಟೆ ಕಲ್ಪನೆಯಲ್ಲಿ ಬಹು ವಿಶಿಷ್ಟವಾಗಿ ಸದರಿ ಬೂತ್ ಅನ್ನು ರಚಿಸಲಾಗಿದ್ದು, ಮತದಾರರನ್ನು ಆಕರ್ಷಿಸುತಿದೆ.

ಚಾಮರಾಜನಗರ ಜಿಲ್ಲೆಯು ಶೇಕಡ 48 ರಷ್ಟು ಅರಣ್ಯ ಸಂಪತ್ತನ್ನು ಹೊಂದಿರುವ ಜಿಲ್ಲೆಯಾಗಿದ್ದು, ಸಾಂಸ್ಕೃತಿಕವಾಗಿ ಶ್ರೀಮಂತವಾಗಿರುವ ಬುಡಕಟ್ಟು ಸಮುದಾಯವನ್ನು ಹೊಂದಿದೆ. ಅರಣ್ಯ ಮತ್ತು ಹಾಗೂ ಬುಡಕಟ್ಟು ಸಂಸ್ಕೃತಿ ತೊರಿಸುವ ಸಲುವಾಗಿ ಹಲವು ಮತಗಟ್ಟೆ ಗಳನ್ನು ಸುಂದರವಾಗಿ ಸಿದ್ಧಪಡಿಸಲಾಗಿದೆ. ಅರಣ್ಯ ವಾಸಿಗಳು ಬಳಸುವ ವಸ್ತುಗಳು, ಆಹಾರಪದ್ಧತಿ, ಆಚಾರ ವ್ಯವಸ್ಥೆ ಇತ್ಯಾದಿಗಳನ್ನು ಹಸಿರು ಮತಗಟ್ಟೆ



ಮತ್ತು ಬುಡಕಟ್ಟು ಮತಗಟ್ಟೆಗಳಲ್ಲಿ ಚಿತ್ರಿಸಲಾಗಿದೆ. 'ಜಾನಪದ ಕಲೆಗಳ ತವರೂರು ಚಾಮರಾಜನಗರ ' ಜಿಲ್ಲೆಯ ಚಾಮರಾಜ ನಗರ ಹೆಸರಿಗೆ ಸರಿಸಾಟಿಯಾಗಿ ಜಿಲ್ಲೆಯ ಸಾಂಸ್ಕೃತಿಕ ಮಹತ್ವ ಸಾರುವ ಸಾಂಪ್ರದಾಯಿಕ ಮತಗಟ್ಟೆಗಳನ್ನು ತೆರೆಯಲಾಗಿದ್ದು ಚಾಮರಾಜನಗರದ ರಾಮಸಮುದ್ರದ ಮತಗಟ್ಟೆಯಲ್ಲಿ ಹಿಂದಿನ ಕಾಲದಲ್ಲಿ ಬಳಸುತ್ತಿದ್ದ ಬೀಸುವಕಲ್ಲು, ಒಣಕೆ, ಜನಪದ ಸಂಗೀತ ಪರಿಕರಗಳದ್ದು ಜನಪದ ಕಲಾವಿದರು ಕೂಡ ಇರಲಿದ್ದಾರೆ.

ಜಿಲ್ಲೆಯಲ್ಲಿ ಯುವ ಮತದಾರರನ್ನು ಮತದಾನದತ್ತ ಸೆಳೆಯಲು, ನೈತಿಕ ಮತದಾನ ಬೆಂಬಲಿಸಲು ಪ್ರೇರೆಪಿಸುವ ಸದುದ್ದೇಶದಿಂದ ಯುವ ಸೌರಭ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು ರಾಹುಲ್ ದ್ರಾವಿಡ್ ಸೇರಿದಂತೆ ಖ್ಯಾತನಾಮರ ಭಾವಚಿತ್ರಗಳನ್ನು ಅಳವಡಿಸಿ ಮತದಾನದ ಮಹತ್ವ ಸಾರಲಾಗಿದೆ. ಒಟ್ಟಿನಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ವಿಶೇಷ, ವಿಶಿಷ್ಟ ಮತಗಟ್ಟೆಗಳು ಮತದಾರರನ್ನು ಸೆಳೆಯುತ್ತಿದೆ.

ಲೋಕಸಭಾ ಚುನಾವಣೆ: ಮತದಾನಕ್ಕೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ

ನಿರ್ಭೀತಿಯಿಂದ ತಪ್ಪದೇ ಎಲ್ಲರೂ ಮತದಾನ ಮಾಡಿ: ಡಾ.ಅವಿನಾಶ್ ಮೆನನ್ ರಾಜೇಂದ್ರನ್

■ ಕಾಯಕಯೋಗಿ ಸುದ್ದಿ

ರಾಮನಗರ: ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣೆ-2024ರ ಮತದಾನವು ಏ. 26ರ ಶುಕ್ರವಾರ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದ್ದು, ಮತದಾನಕ್ಕೆ ಜಿಲ್ಲಾಡಳಿತದ ಪರಿಪೂರ್ಣ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 15 ಜನ ಅಭ್ಯರ್ಥಿಗಳು ಕಣದಲ್ಲಿದ್ದು, ಒಂದು ನೋಟಾ ಆಯ್ಕೆ ಇರುತ್ತದೆ. ಮತಗಟ್ಟೆಗಳ ವಿವರಗಳನ್ನು ಚುನಾವಣಾ ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿದೆ. ಮತದಾನ ಮಾಡುವ ಸಂದರ್ಭದಲ್ಲಿ ಅರ್ಹ ಗುರುತಿನ ಚೀಟಿಯನ್ನು ಸಲ್ಲಿಸಿ ಮತದಾನ ಮಾಡಬಹುದಾಗಿದೆ. ಬಿಸಿಲಿನ ತಾಪಮಾನ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಆರೋಗ್ಯದ ದೃಷ್ಟಿಯಿಂದ ಮತಗಟ್ಟೆಗಳಿಗೆ ಮಕ್ಕಳನ್ನು ಕರೆತರಬಾರದು ಹಾಗೂ ಮತ ಗಟ್ಟೆಗಳಲ್ಲಿ ಸಂಪೂರ್ಣವಾಗಿ ಮೊಬೈಲ್ ಗಳನ್ನು ನಿಷೇಧಿಸಲಾಗಿದೆ ಎಂದರು.

ಮತದಾರರ ವಿವರ: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ 1424685 ಪುರುಷ ಮತದಾರರು, 1377570 ಮಹಿಳಾ ಮತದಾರರು ಹಾಗೂ 325 ತೃತೀಯ ಲಿಂಗ ಮತದಾರರಿದ್ದು, ಒಟ್ಟಾರೆ 2802580 ಮತದಾರರಿದ್ದಾರೆ. ಕುಣಿಗಲ್ ತಾಲ್ಲೂಕಿನಲ್ಲಿ 203228, ರಾಜರಾಜೇಶ್ವರಿ ನಗರದಲ್ಲಿ 504617, ಬೆಂಗಳೂರು ದಕ್ಷಿಣದಲ್ಲಿ 750785, ಆನೇಕಲ್‌ನಲ್ಲಿ 423844, ಮಾಗಡಿಯಲ್ಲಿ 236483, ರಾಮನಗರದಲ್ಲಿ 221098, ಕನಕಪುರದಲ್ಲಿ 231262, ಚನ್ನಪಟ್ಟಣದಲ್ಲಿ 231263 ಮತದಾರರಿದ್ದಾರೆ.

ಮತಗಟ್ಟೆಗಳ ವಿವರ: ಒಟ್ಟಾರೆ 2829 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದರು. 233 ಸೂಕ್ಷ್ಮ ಮತಗಟ್ಟೆಗಳಿಗೆ 400 ಜನ



ಮೈಕ್ರೋ ವೀಕ್ಷಕರನ್ನು ನೇಮಿಸಲಾಗಿದೆ.

ವಿಶೇಷ ಮತಗಟ್ಟೆ ಸ್ಥಾಪನೆ: ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 5 ಸಖೀ ಮತಗಟ್ಟೆಗಳು, 1 ವಿಕಲಚೇತನರ ನಿರ್ವಹಣೆ ಮತಗಟ್ಟೆ, 1 ಯುವಜನ ನಿರ್ವಹಣೆಯ ಮತ ಗಟ್ಟೆ, 1 ಧ್ಯೇಯ ಆಧಾರಿತ ಮತಗಟ್ಟೆ, 1 ಸಾಂಪ್ರದಾಯಿಕ ಮತಗಟ್ಟೆಯನ್ನು ಸ್ಥಾಪಿಸಲಾಗಿದೆ.

ಪೊಲೀಸ್ ಬಂದೋಬಸ್ತ್: ಮತದಾನ ಸುಸೂತ್ರವಾಗಿ ನಡೆಯಲು ಪೊಲೀಸ್ ಇಲಾಖೆ ವತಿಯಿಂದ 2300 ಜನ ಪೊಲೀಸರು, ಕೆಎಸ್ಆರ್‌ಪಿಯಿಂದ 5 ತುಕಡಿಗಳು, 94 ಜನ ಸೆಕ್ಟರ್ ಅಧಿಕಾರಿಗಳು, 63 ಜನ ತುಕಡಿ ಗಳು, 1041 ಸಿವಿಲ್ ಪೊಲೀಸರು, 824 ಗೃಹ ರಕ್ಷಕರನ್ನು ನೇಮಕ ಮಾಡಲಾಗಿದೆ. ಯಾವುದೇ ಅಮಿಷಗಳಿಗೆ ಒಳಪಡದೆ ಮತದಾನ ಮಾಡುವಂತೆ ಹಾಗೂ ಯಾವುದೇ ದೂರುಗಳಿದ್ದಲ್ಲಿ ಟೋಲ್ ಫ್ರೀ ಸಂಖ್ಯೆ: 1950ಗೆ ಮಾಹಿತಿ ನೀಡಿದ್ದಲ್ಲಿ, ಇಲಾಖೆಯ ಸಿಬ್ಬಂದಿ ಗಳು ಕ್ರಮ ವಹಿಸುವರು. ಮತಗಟ್ಟೆಯಿಂದ 200 ಮೀಟರ್ ಅಂತರದಲ್ಲಿ ಮತಯಾಚನೆ ಮಾಡಬಾರದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಅವರು ಮಾಹಿತಿ ನೀಡಿದರು.

ಪೂರ್ವ ಪ್ರಮಾಣೀಕರಣ ಅನುಮತಿ: ಚುನಾವಣಾ ಆಯೋಗದ ನಿರ್ದೇಶನದಂತೆ ಮುದ್ರಣ ಮಾಧ್ಯಮದಲ್ಲಿ ಯಾವುದೇ ಪ್ರಚೋದಕ, ತಪ್ಪು ದಾರಿಗೆಳೆಯುವ ಅಥವಾ ದ್ವೇಷದ ಜಾಹೀರಾತುಗಳಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ಖಚಿತಪಡಿಸಿಕೊಳ್ಳಲು, ಯಾವುದೇ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು, ಯಾವುದೇ ಇತರ ಸಂಸ್ಥೆಗಳು ಅಥವಾ ವ್ಯಕ್ತಿಗಳು ರಾಜಕೀಯ ಜಾಹೀರಾತುಗಳನ್ನು ಮತದಾನದ ದಿನ ಹಾಗೂ ಮತದಾನದ ಮುನ್ನ ದಿನದಂದು (ಏಪ್ರಿಲ್ 25 ಹಾಗೂ ಏಪ್ರಿಲ್ 26) ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಜಿಲ್ಲಾ ಮಟ್ಟದ ಎಂ.ಸಿ.ಎಂ.ಸಿ ಸಮಿತಿಯಿಂದ ಪೂರ್ವ-ಪ್ರಮಾಣೀಕರಣ ಅನುಮತಿಯನ್ನು ಕಡ್ಡಾಯವಾಗಿ ಪಡೆಯಬೇಕು ಎಂದರು.

ಮತದಾನ ದಿನದಂದು ವೇತನ ಸಹಿತ ರಜೆ: ಏಪ್ರಿಲ್ 26 ರಂದು ಮತದಾನ ನಡೆಯಲಿದ್ದು, ಮತದಾನ ದಿನದಂದು ಮತ ಚಲಾಯಿಸಲು ಅನುಕೂಲವಾಗುವಂತೆ ಆರ್ಹ ಮತದಾರರಾಗಿರುವ ಎಲ್ಲಾ ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರೆ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಪ್ರಜಾಪ್ರತಿನಿಧಿ ಕಾಯ್ದೆ – 1951 ಅಡಿಯಲ್ಲಿ ಎಲ್ಲಾ ಉಪಬಂಧಗಳಿಗೆ ಒಳಪಟ್ಟು ವೇತನ ಸಹಿತ ರಜೆ ನೀಡಲಾಗು ವುದು ಎಂದರು.

ವಿಕಲಚೇತನರ ಮತದಾರರು ಮತದಾನ ಮಾಡಲು ವಿವಿಧ ಸೌಲಭ್ಯ: ವಿಕಲಚೇತನರ ಮತದಾರರು ಮತದಾನ ಮಾಡಲು ಅನುವಾಗುವಂತೆ ವಿಲ್‌ಚೇರ್, ರ‍್ಯಾಂಪ್ (wheel chair, Ramp) ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ದೃಷ್ಟಿದೋಷವುಳ್ಳ ವಿಕಲಚೇತನರಿಗೆ ಮ್ಯಾಗ್ನಿಫೈಯಿಂಗ್ ಗ್ಲಾಸ್ ಸೌಲಭ್ಯ ಹಾಗೂ ಬ್ರೈಲ್ ಲಿಪಿಯಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳ ಮಾಹಿತಿ 7ಎ ಡಮ್ಮಿ ಪೋಸ್ಟಲ್ ಬ್ಯಾಲೆಟ್‌ನ ಸೌಲಭ್ಯವನ್ನು ಪ್ರತಿ ಮತಗಟ್ಟೆಯಲ್ಲಿ ಒದಗಿಸಲಾಗುವುದು.

ಚುನಾವಣೆ ನೀತಿ ಸಂಹಿತೆ 1961ರ ನಿಯಮ 49ಎನ್ ರನ್ವಯ ದೃಷ್ಟಿದೋಷವುಳ್ಳ ವಿಕಲಚೇತನರು ಮತದಾನ ಮಾಡಲು ಮತಗಟ್ಟೆಗೆ ಜೊತೆಗಾರರನ್ನು ಕರೆದುಕೊಂಡು ಬರಲು ಅವಕಾಶ ಕಲ್ಪಿಸಲಾಗಿದೆ. ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಂದ ಸಹಾಯ ವನ್ನು ಪಡೆದು ಮತ ಚಲಾಯಿಸಬಹುದಾಗಿದೆ ಎಂದರು.

ಹೋಂಸ್ಟೇ, ಹೋಟೆಲ್, ರೆಸಾರ್ಟ್‌ಗಳಲ್ಲಿ ವಾಸ್ತವ್ಯ ನಿಷೇಧ: 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತದಾನ ಪ್ರಕ್ರಿಯೆಯು ಏ. 26ರಂದು ನಡೆಯಲಿದ್ದು, ರಾಮನಗರ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆಯನ್ನು ನಡೆಸುವ ಹಿನ್ನೆಲೆಯಲ್ಲಿ ಮತದಾನ ಮುಕ್ತಾಯದ ಮುಂಚಿನ 48 ಗಂಟೆಗಳ ಅವಧಿಯಲ್ಲಿ ಅಂದರೆ ಏ. 24ರ ಸಂಜೆ 6 ಗಂಟೆಯಿಂದ ಏ. 26ರ ಮಧ್ಯರಾತ್ರಿ 12 ಗಂಟೆಯವರೆಗೆ ರಾಮನಗರ ಜಿಲ್ಲೆಯಾದ್ಯಂತ ಇರುವ ಎಲ್ಲಾ ವಸತಿಯುತ ಹೋಟೆಲ್ಸ್, ರೆಸಾರ್ಟ್ಸ್ ಹಾಗೂ ಹೋಂಸ್ಟೇಗಳಲ್ಲಿ ಚುನಾವಣೆಗೆ ಸಂಬಂಧಿಸಿದ ಯಾವುದೇ ಸವಾರಂಭ, ಪ್ರಚಾರ ಸಭೆ ಹಾಗೂ ರಾಜಕೀಯ ಚಟುವಟಿಕೆಗಳು ನಡೆಸುವುದನ್ನು ನಿಷೇಧಿಸಲಾಗಿದೆ ಎಂದು ತಿಳಿಸಿದರು.

ಮದ್ಯ ಮಾರಾಟ, ಹಂಚಿಕೆ, ಸಾಗಾಣಿಕೆ ನಿಷೇಧ : ರಾಮನಗರ ಜಿಲ್ಲೆಯಲ್ಲಿ ಚುನಾವಣೆ ಶಾಂತಿ, ಮುಕ್ತ, ನ್ಯಾಯಯುತ ಮತ್ತು ನಿಷ್ಪಕ್ಷಪಾತವಾಗಿ ನಡೆಯಲು ಏ. 26ರಂದು ಮತದಾನ ನಡೆಯುವುದರಿಂದ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-6
26-04-2024
ಬೆಂಗಳೂರು

ಉಚಿತ ಮೊಬೈಲ್ ರಿಪೇರಿ & ಸೇವೆ ತರಬೇತಿಗೆ ನೇರ ಸಂದರ್ಶನ

ತುಮಕೂರು: ರುಡ್‌ಸೆಟ್ ಸಂಸ್ಥೆಯ ವತಿಯಿಂದ ಮೊಬೈಲ್ ರಿಪೇರಿ & ಸೇವೆ ಕುರಿತ 30 ದಿನಗಳ ಉಚಿತ ತರಬೇತಿಗೆ ಮೇ 8 ರಂದು ನೇರ ಸಂದರ್ಶನ ನಡೆಯಲಿದ್ದು, ಜಿಲ್ಲೆಯ ಗ್ರಾಮೀಣ ಭಾಗದ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್, ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯಿತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿವಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 9380162042, 9113880324ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಚುನಾವಣಾಧಿಕಾರಿ ಡಾ.ಶಿವಶಂಕರ ಮಸ್ಟರಿಂಗ್ ಕೇಂದ್ರಗಳ ಭೇಟಿ- ಪರಿಶೀಲನೆ

■ ಕಾಯಕಯೋಗಿ ಸುದ್ದಿ



ದೇವನಹಳ್ಳಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಚುನಾವಣಾಧಿಕಾರಿ ವ್ಯಾಪ್ತಿಯಲ್ಲಿರುವ ಮಸ್ಟರಿಂಗ್ ಕೇಂದ್ರಗಳಿಗೆ ಎಲ್ಲಾ ಮತಗಟ್ಟೆ ಅಧಿಕಾರಿಗಳು ಬಂದು ಮತಗಟ್ಟೆಗಳಿಗೆ ಅಗತ್ಯವಿರುವ ಇವಿಎಂ, ಬ್ಯಾಲೆಟ್ ಯುನಿಟ್, ಕಂಟ್ರೋಲ್ ಯುನಿಟ್, ವಿವಿ ಪ್ಯಾಟ್ ಸೇರಿದಂತೆ ಎಲ್ಲಾ ಮತಗಟ್ಟೆ ಸಾಮಗ್ರಿಗಳನ್ನು ತೆಗೆದುಕೊಂಡು ಬಿ.ಎಂ.ಟಿ.ಸಿ, ಕೆ.ಎಸ್. ಆರ್.ಟಿ.ಸಿ, ಇತರೆ ವಾಹನಗಳ ಮೂಲಕ ಮತಗಟ್ಟೆಗಳಿಗೆ ಪೊಲೀಸ್ ಬಂದೋಬಸ್ತ್ ಮೂಲಕ ತೆರಳಲಿದ್ದಾರೆ. ಎಲ್ಲಾ ಮತಗಟ್ಟೆಗಳಲ್ಲೂ ವಸತಿ, ನೀರಿನ ವ್ಯವಸ್ಥೆ ಸೇರಿದಂತೆ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಏ.26ರಂದು ಬೆಳಗ್ಗೆ 7.00 ರಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದ್ದು, ಅದಕ್ಕಿಂತ ಮುಂಚಿತವಾಗಿ ಬೆಳಗ್ಗೆ 5.30ಕ್ಕೆ ಅಣುಕು ಮತದಾನ ಪ್ರಾರಂಭವಾಗಲಿದ್ದು, 7 ಗಂಟೆಯೊಳಗಾಗಿ ಪೂರ್ಣಗೊಳ್ಳಲಿದೆ. ಮತಗಟ್ಟೆಗಳಲ್ಲಿ ಮತದಾರರಿಗೆ ಯಾವುದೇ ಸಮಸ್ಯೆ ಆಗದಂತೆ ಎಲ್ಲಾ ರೀತಿಯ ಮೂಲ ಭೂತ ಸೌಕರ್ಯಗಳ ವ್ಯವಸ್ಥೆ ಮಾಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಒಟ್ಟು 8,98,448 ಮತದಾರರು ಇದ್ದಾರೆ.

ಚುನಾವಣಾ ವೇಳಾಪಟ್ಟಿಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಿಸಿದಂತೆ ನಾಲ್ಕು ವಿಧಾನಸಭಾ ಮತಕ್ಷೇತ್ರ ಇದ್ದು ಚುನಾವಣಾ ಮತದಾರ ಪಟ್ಟಿಯಲ್ಲಿ ಪ್ರಕಟಿಸಲಾಗಿರುವ ಅಂತಿಮ ಮತದಾರರ ಪಟ್ಟಿಯಲ್ಲಿ ಜಿಲ್ಲೆಯ ನಾಲ್ಕು ತಾಲೂಕುಗಳಿಂದ 8,98,448 ಮತದಾರರು ಇದ್ದಾರೆ. ಇದರಲ್ಲಿ 4,44,084 ಪುರುಷರು, 4,54,221 ಮಹಿಳೆಯರು ಹಾಗೂ 143 ಇತರೆ ಮತದಾರರು ಇದ್ದಾರೆ. ಒಟ್ಟು ಮತದಾರರ ಸಂಖ್ಯೆಯಲ್ಲಿ 18 ರಿಂದ 19 ವರ್ಷದೊಳಗಿನ 23,819 ಯುವ ಮತದಾರರು, 85 ವರ್ಷ ಮೇಲ್ಪಟ್ಟ 10,009 ಹಿರಿಯ ಮತದಾರರು, 13,224 ಅಂಗವಿಕಲ ಮತದಾರರು ಹಾಗೂ 120 ಸೇವಾ ಮತದಾರರು ಇದ್ದಾರೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಎಲ್ಲಾ ಮಾಸ್ಟರಿಂಗ್ ಕೇಂದ್ರಗಳಿಂದ ಬ್ಯಾಲೆಟ್ ಯುನಿಟ್(ಇವಿಎಂ), ಕಂಟ್ರೋಲ್ ಯುನಿಟ್(ಸಿಯು), ವಿವಿ ಪ್ಯಾಟ್ ಗಳನ್ನು ಮತಗಟ್ಟೆಗಳಿಗೆ ತಲುಪಿಸಲು ಈಗಾಗಲೇ ರೂಟ್ ಸಿದ್ಧಪಡಿಸಿಕೊಳ್ಳಲಾಗಿದೆ. ಆ ಪ್ರಕಾರ ಒಂದು ಬಸ್ ನಲ್ಲಿ 5 ರಿಂದ 6 ಮಟಗಟ್ಟೆಗಳ ಅಧಿಕಾರಿಗಳು ತೆರಳಲಿದ್ದಾರೆ. ಇಂದು ಮಧ್ಯಾಹ್ನ ನಂತರ ಮತಗಟ್ಟೆಗಳಿಗೆ ತೆರಳಲಿದ್ದಾರೆ ಎಂದು ಹೇಳಿದರು.

ಅಣುಕು ಮತದಾನದ ವೇಳೆ ಇವಿಎಂ ನಲ್ಲಿ ಲೋಪದೋಷಗಳು ಕಂಡುಬಂದರೆ ಸೆಕ್ಟರ್ ಅಧಿಕಾರಿ ಮೂಲಕ ಕನಿಷ್ಠ 10 ಮತಗಟ್ಟೆಗಳಿಗೆ ನಿಯೋಜನೆ ಮಾಡಿರುವಂತಹ ಮಾರ್ಗ ಅಧಿಕಾರಿಯು(Route Officer) ಪರ್ಯಾಯ ವ್ಯವಸ್ಥೆ ಮಾಡಲಿದ್ದಾರೆ.

ಮತಗಟ್ಟೆ ಅಧಿಕಾರಿಗಳಿಗೆ ಕಿಟ್ ವಿತರಣೆ: ಕೇಂದ್ರಗಳಿಂದ ಮತಗಟ್ಟೆ ಅಧಿಕಾರಿಗಳು, ಇವಿಎಂ, ಸಿಯು, ವಿವಿ ಪ್ಯಾಟ್, ಮತದಾನದ ದಿನ ಅಗತ್ಯವಿರುವ ಚೆಕ್ ಲಿಸ್ಟ್ ಪ್ರಕಾರ ಎಲ್ಲಾ ರೀತಿಯ ಸಾಮಗ್ರಿಗಳು, ಮತಗಟ್ಟೆಗಳಲ್ಲಿ ರಾತ್ರಿ ಉಳಿಯಲು ಮತಗಟ್ಟೆ ಅಧಿಕಾರಿಗಳಿಗೆ ಬೇಕಾದಂತಹ ವ್ಯವಸ್ಥೆ ಮಾಡಲಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಸಂಗಪ್ಪ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.


ವಿಶ್ವ ಮಲೇರಿಯ ದಿನಾಚರಣೆ : ಏ.30ರಂದು ಜಾಥಾ ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ತುಮಕೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ವಿಶ್ವ ಮಲೇರಿಯ ದಿನಾಚರಣೆ ಅಂಗವಾಗಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಏಪ್ರಿಲ್ 30ರಂದು ನಸಿಂಗ್ ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜಾಥಾವು ಅಂದು ಬೆಳಿಗ್ಗೆ 8:30 ಗಂಟೆಗೆ ಮಹಾನಗರ ಪಾಲಿಕೆ ಆವರಣ (ಟೌನ್ ಹಾಲ್)ದಿಂದ ಪ್ರಾರಂಭಗೊಂಡು ಅಶೋಕ ರಸ್ತೆ, ಚರ್ಚ್ ವೃತ್ತ, ಶ್ರೀ ಅಂಜನೇಯ ವೃತ್ತದ ಮೂಲಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿವರೆಗೆ ಸಾಗಲಿದೆ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಕ್ಷಾ ರಾಮಯ್ಯ ಗೆಲುವಿಗೆ ಬೆಂಬಲಿಗರಿಂದ ತಿರುಣಮಲೈ ಗಿರಿ ಪ್ರದಕ್ಷಣೆ

■ ಕಾಯಕಯೋಗಿ ಸುದ್ದಿ



ದೇವನಹಳ್ಳಿ: ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ರಕ್ಷಾರಾಮಯ್ಯ ಅವರು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಅತ್ಯಂತ ಬಹುಮತದೊಂದಿಗೆ ಗೆಲುವು ಸಾಧಿಸಬೇಕು ಎಂದು ಕಾಂಗ್ರೆಸ್‌ನ ಕೆಲವು ಬೆಂಬಲಿಗರು ಅರುಣಾಚಲ ಪ್ರದೇಶದ ತಿರುಣಮಲೈನ ಅರುಣಾಚಲೇಶ್ವರ ದೇವಾಲಯಕ್ಕೆ ತೆರಳಿ ಗಿರಿ ಪ್ರದಕ್ಷಣೆ ಮತ್ತು 14ಕಿಮೀ ಪಾದಯಾತ್ರೆಯನ್ನು ನಡೆಸುವುದರ ಮೂಲಕ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಕಾಂಗ್ರೆಸ್ ಮುಖಂಡ ನವರತ್ನ ಆಗ್ರಾರ ಸಮಾಜ ಸೇವಕ ಎಂ.ಶ್ರೀನಿವಾಸ್ ಮಾತನಾಡಿ, ಕಾಂಗ್ರೆಸ್ ಯುವ ನಾಯಕ ರಕ್ಷರಾಮಯ್ಯ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ಗಿರಿಪ್ರದಕ್ಷಣೆ ಮಾಡಿ, 14ಕಿಮೀ ಪಾದಯಾತ್ರೆಯಲ್ಲಿ ಶ್ರೀ ಸ್ವಾಮಿಗೆ ಪ್ರಾರ್ಥಿಸಲಾಗಿದೆ. ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಶೇ.100ಕ್ಕೆ 100ರಷ್ಟು ರಕ್ಷರಾಮಯ್ಯ ಅವರು ಗೆಲ್ಲುತ್ತಾರೆ. ಕ್ಷೇತ್ರದಲ್ಲಿ ಹೊಸ ಮುಖವಾಗಿದ್ದರೂ, ಶ್ರೀಮಂತ ಕುಟುಂಬದಿಂದ ಬಂದಿದ್ದರೂ ಸಹ ಸಾಮಾಜಿಕ ಸೇವೆಯನ್ನು ಮಾಡುವ ಮನಸ್ಥಿತಿಯನ್ನು ಇಟ್ಟುಕೊಂಡಿರುವ ವ್ಯಕ್ತಿತ್ವ ಅವರದ್ದಾಗಿದೆ ಎಂದರು.

ಕನ್ನಮಂಗಲ ಗ್ರಾಪಂ ಸದಸ್ಯ ಕೆ.ಎನ್.ಕೃಷ್ಣಯ್ಯ ಮಾತನಾಡಿ, ಕೋವಿಡ್ ಸಂದರ್ಭದಲ್ಲಿ ಯುವ ಕಾಂಗ್ರೆಸ್ ತಂಡದಲ್ಲಿ ರಕ್ಷರಾಮಯ್ಯ ಅವರು ಸಾಮಾಜಿ ಸೇವೆಯನ್ನು ಮಾಡುವುದರ ಮೂಲಕ ದೇವನಹಳ್ಳಿ ವಿಧಾನಸಭಾ ಕ್ಷೇತ್ರ ಸೇರಿದಂತೆ ಹಲವಾರು ಕಡೆಗಳಲ್ಲಿ ದಿನಸಿ ಕಿಟ್‌ಗಳನ್ನು ಹಂಚಿದ್ದಾರೆ. ಬಡವರ ರಕ್ಷಣೆಗಾಗಿಯೇ ರಕ್ಷರಾಮಯ್ಯ ಅವರು ಅಭ್ಯರ್ಥಿಯಾಗಿರುವುದು ನಮ್ಮ ಸುದೈವವಾಗಿದೆ. ಪ್ರಜ್ಞಾವಂತ ಮತದಾರರು ಈ ಬಾರಿ ರಕ್ಷರಾಮಯ್ಯ ಅವರ ಕೈ ಹಿಡಿಯಿತ್ತಾರೆಂಬ ಭರವಸೆ ಇದೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಮಂಜುನಾಥ್, ಪ್ರಜನಹಳ್ಳಿ ರಾಜು, ಗಂಗಾಧರ್, ಕುದುರೆಗೆರೆ ಮಂಜುನಾಥ್ ಸೇರಿದಂತೆ ಇನ್ನಿತರರು ಇದ್ದರು.

ಮರಳಿ ಗೂಡಿಗೆ ಬಂದ ಅಮರ್ ನಾಥ್



■ ಕಾಯಕಯೋಗಿ ಸುದ್ದಿ

ದೇವನಹಳ್ಳಿ: ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ಕುರಿತು ಅಸಮಾಧಾನವಿದ್ದು ,ಇದೇ ಮೊದಲ ಬಾರಿಗೆ ದೇವನಹಳ್ಳಿ ಶಾಸಕರಾಗಿರುವವರು ಸಚಿವರಾಗಿದ್ದಾರೆ ಅವರ ಅಭಿವೃದ್ಧಿಯ ಕೆಲಸಗಳು ಮತ್ತು ಕಾರ್ಯವೈಖರಿಯನ್ನು ಮೆಚ್ಚಿ ಮರಳಿ ಕಾಂಗ್ರೆಸ್ ಗೆ ಸೇರ್ಪಡೆಯಾದ್ದೇನೆ ಎಂದು ಮರಳಿ ಗೂಡಿಗೆ ಬಂದ ಗ್ರಾಪಂ.ಮಾಜಿ ಅಧ್ಯಕ್ಷ ಅಮರ್ ನಾಥ್ ಹೇಳಿದರು.

ದೇವನಹಳ್ಳಿ ತಾಲೂಕಿನ ವೆಂಕಟಗಿರಿಕೋಟೆಯಲ್ಲಿ ಸಚಿವ ಕೆ.ಎಚ್.ಮುನಿಯಪ್ಪ ಅವರ ಉಪಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ನಾನು ಕಾಂಗ್ರೆಸ್ ಪಕ್ಷಕ್ಕೆ ಹೊಸಬನಲ್ಲ ,ಸಚಿವರು ಜಿಲ್ಲಾ ಉಸ್ತುವಾರಿಗಳಾಗಿದ್ದು ಜಿಲ್ಲೆಯಾದ್ಯಂತ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ ಆದ್ದರಿಂದ ನಮ್ಮ ಗ್ರಾಮಗಳ ಅಭಿವೃದ್ಧಿಯ ಉದ್ದೇಶದಿಂದ ಕಾಂಗ್ರೆಸ್ ಬಂದಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮಚಂದ್ರಪ್ಪ ಸೇರಿದಂತೆ ಕಾಂಗ್ರೆಸ್ ಮುಖಂಡರು ಮತ್ತಿತರರು ಇದ್ದರು.

ಇಂದು ಮತದಾನ ಹಬ್ಬ

ಮಂಡ್ಯ: ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತದಾನದ ಹಬ್ಬ ಏ.26ರ ಶುಕ್ರವಾರ ನಡೆಯಲಿದ್ದು, ಮತದಾನದ ದಿನದಂದು ಮತದಾರರನ್ನು ಹಬ್ಬದ ವಾತಾವರಣದ ರೀತಿ ಸ್ವಾಗತಿಸಲು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಯುವ, ಸಖಿ, ವಿಶೇಷಚೇತನ, ಸಂಪ್ರದಾಯಿಕ ಹಾಗೂ ವಿಷಯಾಧಾರಿತ ಮತಗಟ್ಟೆಗಳು ವಿವಿಧ ರೀತಿಯಲ್ಲಿ ಮತದಾರರ ಕೈ ಬೀಸಿ ಕರೆಯಲಿವೆ.

ಮದ್ದೂರು ತಾಲ್ಲೂಕಿನ ಬನ್ನಹಳ್ಳಿ ಮತಗಟ್ಟೆಯಲ್ಲಿ ಕೊಕ್ಕರೆ ಬೆಳ್ಳೂರು ಅಭಯಾರಣ್ಯ ವಿಷಯಾಧಾರಿತ ಮತಗಟ್ಟೆಯಲ್ಲಿ ಗೋಡೆ ಬರಹಗಳ ಮೂಲಕ ಆಕರ್ಷಣೀಯವಾಗಿ ಚಿತ್ರದ ಮೂಲಕ ಮೂಡಿಸಿ ಮತದಾರರ ಮನಸೂರೆಗೊಳ್ಳುವಂತೆ ನಿರ್ಮಿಸಲಾಗಿದೆ.

ಕಾಂಗ್ರೆಸ್ ಬೆಂಬಲಿಸುವಂತೆ ಮನೆ ಮನೆಗೂ ಪ್ರಚಾರ

ಮಮತಾ ಶಿವಾಜಿಗೌಡ ನೇತೃತ್ವದಲ್ಲಿ ಮತದಾರರಲ್ಲಿ ಮತಯಾಚನೆ

■ ಕಾಯಕಯೋಗಿ ಸುದ್ದಿ



ದೇವನಹಳ್ಳಿ : ಕರ್ನಾಟಕದ ಜನತೆ ಕಾಂಗ್ರೆಸ್ ಗ್ಯಾರಂಟಿಗಳಿಂದ ತೃಪ್ತಿಯಾಗಿದ್ದಾರೆ. ಈ ಬಾರಿ ನಡೆಯುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ ಗೆ ಹೆಚ್ಚಿನ ಮತವನ್ನು ಮತದಾರರು ನೀಡುತ್ತಾರೆಂದು ಕೊಯಿರಾ ಗ್ರಾಪಂ ಉಪಾಧ್ಯಕ್ಷೆ ಮಮತಾ ಶಿವಾಜಿಗೌಡ ಹೇಳಿದರು.

ದೇವನಹಳ್ಳಿ ತಾಲೂಕಿನ ಕೊಯಿರಾ ಗ್ರಾಮದಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ ಪರವಾಗಿ ಮತಯಾಚನೆ ನಡೆಸಿ ಅವರು ಮಾತನಾಡಿ ಬಿಜೆಪಿ ಉಳ್ಳವರ ಪಕ್ಷ ,ಬಿಜೆಪಿ ಆಡಳಿತದಲ್ಲಿ ಜನರು ನೆಮ್ಮದಿಯಿಂದ ಬದುಕು ನಡೆಸಿಲ್ಲ , ಸಮಾಜಮುಖಿಯಾಗಿರುವ ರಾಹುಲ್ ಗಾಂಧಿ ಅವರ ಕೈ ಬಲಪಡಿಸಬೇಕು. ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ದೇಶ ಅಭಿವೃದ್ಧಿ ಖಿಚಿತ,ತಪ್ಪದೇ ಅಭ್ಯರ್ಥಿ ರಕ್ಷಾ ರಾಮಯ್ಯ ಅವರಿಗೆ ನಿಮ್ಮ ಮತ ನೀಡಿ ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಮಾಜಿ ಅಧ್ಯಕ್ಷ ಆಂಜಿನಮ್ಮ ,ಸರಸ್ವತಿ ವಿಜಯಕುಮಾರ್, ಬಿಂದು ಬಸವರಾಜ್ ಸೇರಿದಂತೆ ಮಹಿಳಾ ಕಾರ್ಯಕರ್ತರು ಭಾಗವಹಿಸಿದ್ದರು.

ಪ್ರತಿಷ್ಠಿತ ಶಾಲೆ 6ನೇ ತರಗತಿ ಪ್ರವೇಶಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

■ ಕಾಯಕಯೋಗಿ ಸುದ್ದಿ

ತುಮಕೂರು: ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ವ್ಯಾಪ್ತಿಯಲ್ಲಿರುವ ಪ್ರತಿಷ್ಠಿತ ಶಾಲೆಗಳ 6ನೇ ತರಗತಿ ಪ್ರವೇಶಾತಿ ಕಲ್ಪಿಸಲು ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಅರ್ಜಿ ಸಲ್ಲಿಸುವವರು ಪ್ರತಿಭಾವಂತ ವಿದ್ಯಾರ್ಥಿಯಾಗಿದ್ದು, ಕುಟುಂಬದ ಆದಾಯ ಮಿತಿ 2.50 ಲಕ್ಷ ರೂ.ಗಳ ಒಳಗಿರಬೇಕು ಹಾಗೂ 5ನೇ ತರಗತಿಯಲ್ಲಿ ಶೇಕಡ 60 ಅಂಕ ಪಡೆದಿರಬೇಕು. ಪ್ರವೇಶಾತಿ ಕಲ್ಪಿಸುವಾಗ ಬಡತನ ರೇಖೆಗಿಂತ ಕೆಳಗಿನ ಮಟ್ಟದ, ಅತಿ ಹಿಂದುಳಿದ ಪೌರ ಕಾರ್ಮಿಕರು, ಸಫಾಯಿ ಕರ್ಮಚಾರಿ, ಸ್ಮಶಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ, ವಿಶೇಷ ಚೇತನರು, ಕೋವಿಡ್-19 ಮುಂತಾದ ಪ್ರಕೃತಿ ವಿಕೋಪದಿಂದ ತಂದೆ ತಾಯಿಯನ್ನು ಕಳೆದುಕೊಂಡವರ, ಸಿಂಗಲ್ ಪ್ಯಾಮಿಲಿ, ಯೋಜನಾ ನಿರಾಶ್ರಿತರು, ಮಾಜಿ ಸೈನಿಕರು, ಕೊಳಗೇರಿಗಳಲ್ಲಿ ವಾಸಿಸುತ್ತಿರುವವರ, ಕೃಷಿ ಕಾರ್ಮಿಕರ, ಸಾಲ ಬಾಧೆಯಿಂದ ಆತ್ಮಹತ್ಯೆಗೆ ಗುರಿಯಾದವರ, ದೌರ್ಜನ್ಯದಲ್ಲಿ ನೊಂದವರ, ಜೀತ ವಿಮುಕ್ತ ಮಕ್ಕಳು ಹಾಗೂ ದೇವದಾಸಿಯರ ಮಕ್ಕಳಿಗೆ ಮೊದಲನೇ ಆದ್ಯತೆ ನೀಡಲಾಗುವುದು.

ಅರ್ಜಿಯನ್ನು ಜಾಲತಾಣ, ತಿ.ಇ.ಚಿಡಿ.ಟಿಬಿಟಿಎಟಿ ಮೂಲಕ ಮೇ 9 ರಿಂದ 21ರವರೆಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಆನ್‌ಲೈನ್ ಅರ್ಜಿಯೊಂದಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಛೇರಿ ಅಥವಾ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿಗೆ ಮೇ 21ರ ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ 14 ಕ್ಷೇತ್ರಗಳಿಗೆ ಮತದಾನ; ಬೆಳಗ್ಗೆ 7 ಗಂಟೆಯಿಂದ ವೋಟಿಂಗ್ ಶುರು, ಸುಗಮ ಮತದಾನಕ್ಕೆ ಸಿದ್ಧತೆ ಪೂರ್ಣ

ಬೆಂಗಳೂರು: ಇಂದು ಮನೆ ಮನೆ ತೆರಳಿ (Door to Door Campaign) ಮತಬೇಟೆ ರಾಜ್ಯದಲ್ಲಿ ನಡೆಯಲಿರೋ ಮೊದಲ ಹಂತದ 14 ಕ್ಷೇತ್ರಗಳ (Constituency) ಬಹಿರಂಗ ಚುನಾವಣಾ (Election) ಪ್ರಚಾರಕ್ಕೆ ತೆರೆ ಬಿದ್ದಿದೆ. ನಿನ್ನೆ ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರ ಅಂತ್ಯಗೊಂಡಿದ್ದು, ಸದ್ಯ ಮನೆ ಮನೆ ಪ್ರಚಾರ ಶುರುವಾಗಿದೆ.

ನೀತಿ ಸಂಹಿತೆ ಉಲ್ಲಂಘನೆಯಾಗದಂತೆ (Code of Conduct) ಚುನಾವಣಾ ಆಯೋಗ (Election Commission) ಹದ್ದಿನ ಕಣ್ಣಿಟ್ಟಿದೆ. 14 ಕ್ಷೇತ್ರಗಳ ಅಭ್ಯರ್ಥಿಗಳು ಇಂದು ಮನೆ ಮನೆಗೆ ತೆರಳಿ ಪ್ರಚಾರ ನಡೆಸಲಿದ್ದಾರೆ.

ಮನೆ ಮನೆ ಪ್ರಚಾರದ ವೇಳೆ ಅಭ್ಯರ್ಥಿ ಜೊತೆ 5 ಜನಕ್ಕಿಂತ ಹೆಚ್ಚು ಜನರು ಇರುವಂತಿಲ್ಲ. ಧ್ವನಿ ವರ್ಧಕ ಬಳಸದೇ ಮತಯಾಚನೆ ಮಾಡಬಹುದಾಗಿದೆ. ಇನ್ನು ಕ್ಷೇತ್ರದಲ್ಲಿ ಅಭ್ಯರ್ಥಿಗಳನ್ನ